ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 24 RNI Number : KNKAN/25/A2770 28-01-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :24 ರಾಯಚೂರು 28-01-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಇಂದಿನಿಂದ ಸಂಸತ್‌ನ ಬಜೆಟ್ ಅಧಿವೇಶನ ಆರಂಭ: ಸುಗಮ ಕಲಾಪಗಳಿಗಾಗಿ ಸಹಕರಿಸಿ ಎಂದು ವಿಪಕ್ಷಗಳಿಗೆ ಮನವಿ ಮಾಡಿದ ಸರ್ಕಾರ

ನವದೆಹಲಿ,ಜ.27-

ಇಂದು ಕೇಂದ್ರ ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳು - ಲೋಕಸಭೆ ಮತ್ತು ರಾಜ್ಯಸಭೆ - ಎರಡೂ ಸದನಗಳನ್ನು ಸುಗಮವಾಗಿ ನಡೆಸಲು ಸಹಕರಿಸುವಂತೆ ಮನವಿ ಮಾಡಿದೆ.

ಬಜೆಟ್ ಅಧಿವೇಶನದ ಮೊದಲ ಭಾಗದಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲೆ ವಂದನಾ ನಿರ್ಣಯ ಮಂಡಿಸಲಾಗುವುದು. ಅದರ ನಂತರ ಸಂಸತ್ತಿನ ಎರಡೂ ಸದನಗಳಲ್ಲಿ ಬಜೆಟ್ ಕುರಿತು ಚರ್ಚೆ ನಡೆಯಲಿದೆ.



ಅಧಿವೇಶನವನ್ನು ಸುಗಮವಾಗಿ ನಡೆಸಲು ಎಲ್ಲಾ ಪಕ್ಷಗಳು ಸಹಕರಿಸಬೇಕೆಂದು ನಾವು ವಿನಂತಿಸಿದ್ದೇವೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಬಜೆಟ್ ಅಧಿವೇಶನಕ್ಕೂ ಮುನ್ನ ನಡೆದ ಸರ್ವಪಕ್ಷ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸರ್ವಪಕ್ಷಗಳ ಸಭೆಯ ನೇತೃತ್ವ ವಹಿಸಿದ್ದರು ಎಂದು ರಿಜಿಜು ಹೇಳಿದರು. ರಾಜ್ಯಸಭಾ ಆಡಳಿತ ಪಕ್ಷದ ನಾಯಕ ಜೆ.ಪಿ. ನಡ್ಡಾ, ಕೇಂದ್ರ ಸಚಿವರಾದ ಅರ್ಜುನ್ ರಾಮ್ ಮೇಘವಾಲ್, ಎಲ್. ಮುರುಗನ್ ಕೂಡ ಸಭೆಯಲ್ಲಿ ಹಾಜರಿದ್ದರು. ವಿವಿಧ ಪಕ್ಷಗಳ ನಾಯಕರು ನೀಡಿದ ಸಲಹೆಗಳನ್ನು ನಾವು ಗಮನಿಸಿದ್ದೇವೆ. ಇದು ಬಜೆಟ್ ಅಧಿವೇಶನ ಮತ್ತು ಈ ವರ್ಷದ ಮೊದಲ ಸಂಸತ್ ಅಧಿವೇಶನವಾಗಿರುವುದರಿಂದ ಸದನವನ್ನು ನಡೆಸಲು ಸಹಕಾರ ನೀಡುವಂತೆ ನಾವು ಎಲ್ಲಾ ರಾಜಕೀಯ ಪಕ್ಷಗಳಿಗೆ ಮನವಿ ಮಾಡಿದ್ದೇವೆ ಎಂದು ರಿಜಿಜು ಹೇಳಿದರು.

ಜನವರಿ 29 ರಂದು ಆರ್ಥಿಕ ಸಮೀಕ್ಷೆಯನ್ನು ಮಂಡಿಸಲಾಗುವುದು ಮತ್ತು ಫೆಬ್ರವರಿ 1 ರಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್ ಭಾಷಣ ಮಾಡಲಿದ್ದಾರೆ ಎಂದು ರಿಜಿಜು ಸಭೆಯ ಕುರಿತು ಮಾಹಿತಿ ನೀಡಿದರು.

ಸರ್ಕಾರದ ನಡೆ ಟೀಕಿಸಿದ ಕಾಂಗ್ರೆಸ್; ಅಧಿವೇಶನಕ್ಕೂ ಮುನ್ನ ಕೇಂದ್ರವು ತನ್ನ ಪ್ರಸ್ತಾವಿತ ಸಂಸದೀಯ ಕಾರ್ಯಸೂಚಿಯನ್ನು ಹಂಚಿಕೊಳ್ಳದಿದ್ದಕ್ಕಾಗಿ ಕಾಂಗ್ರೆಸ್ ಸರ್ಕಾರವನ್ನು ಟೀಕಿಸಿದೆ. ಪ್ರಸ್ತಾಪಿಸಬೇಕಾದ ಮಸೂದೆಗಳ ಪಟ್ಟಿಯನ್ನು ಹಂಚಿಕೊಳ್ಳದಿದ್ದಕ್ಕಾಗಿ ವಿರೋಧ ಪಕ್ಷಗಳು ಅತೃಪ್ತಿ ಹೊಂದಿವೆ ಎಂದು ಸಭೆಯ ನಂತರ ಮಾತನಾಡಿದ ಕಾಂಗ್ರೆಸ್ ನಾಯಕ ಕೆ ಸುರೇಶ್ ಹೇಳಿದರು.

ಈ ನಡುವೆ ಸಂಸದೀಯ ಕಾರ್ಯಸೂಚಿಯನ್ನು ನಂತರ ವಿತರಿಸಲಾಗುವುದು ಎಂದು ಸಚಿವರು ಸ್ಪಷ್ಟನೆ ಕೊಟ್ಟರು. ಆದರೆ, ಕಾಂಗ್ರೆಸ್ ಈ ವಿವರಣೆಯನ್ನು ಅತೃಪ್ತಿಕರ ಎಂದು ಹೇಳಿದೆ. ಸರ್ಕಾರವು ಪಾರದರ್ಶಕತೆಯ ಕೊರತೆಯನ್ನು ಹೊಂದಿದೆ ಎಂದು ಕಾಂಗ್ರೆಸ್ ನಾಯಕ ಸುರೇಶ್ ಆರೋಪಿಸಿದ್ದಾರೆ.

ಹೊಸ ಯುಜಿಸಿ ಮಾರ್ಗಸೂಚಿಗಳು ಸೇರಿದಂತೆ ಬಹು ವಿಷಯಗಳ ಕುರಿತು ಚರ್ಚೆಗಾಗಿ ವಿರೋಧ ಪಕ್ಷದ ಬೇಡಿಕೆಗಳಿಗೆ ಪ್ರತಿಕ್ರಿಯಿಸಿದ ಸಚಿವ ರಿಜಿಜು, ಸರ್ಕಾರವು ಚರ್ಚೆಗೆ ಮುಕ್ತವಾಗಿದೆ. ಆದರೆ ಬಜೆಟ್ ಅಂಗೀಕರಿಸುವ ತಮ್ಮ ಸಾಂವಿಧಾನಿಕ ಜವಾಬ್ದಾರಿಯನ್ನು ಪಕ್ಷಗಳಿಗೆ ನೆನಪಿಸಿದೆ ಎಂದರು.

ವಾಪಸ್ ಪಡೆಯುವುದಿಲ್ಲ: ಈ ನಡುವೆ ಹೆಸರನ್ನು ಬದಲಿಸಿ ಹೊಸದಾಗಿ ಪರಿಚಯಿಸಲಾದ - ಕಾನೂನನ್ನು ಸರ್ಕಾರ ಹಿಂತೆಗೆದುಕೊಳ್ಳುವುದಿಲ್ಲ ಎಂದು ರಿಜಿಜು ಇದೇ ವೇಳೆ ಸ್ಪಷ್ಟಪಡಿಸಿದರು. ಒಮ್ಮೆ ಕಾನೂನನ್ನು ರಾಷ್ಟ್ರದ ಮುಂದೆ ಇರಿಸಿದ ನಂತರ, ನಾವು ಅದನ್ನು ಹಿಮ್ಮುಖಗೊಳಿಸಲು ಎಂದು ಅವರು ರಿಜಿಜು ಸ್ಪಷ್ಟಪಡಿಸಿದರು.

ರಾಯಚೂರು ಉತ್ಸವದ ಸಿದ್ಧತಾ ಕಾರ್ಯ ಚುರುಕಾಗಲಿ: ನಿತೀಶ್ ಕೆ



ರಾಯಚೂರು ಜ.27-

ಫೆ.5 ರಿಂದ ಮೂರು ದಿನಗಳ ಕಾಲ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಇದ್ದು ಅಧಿಕಾರಿಗಳು ಮತ್ತು ಸಿಬ್ಬಂದಿ ಚುರುಕಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಳೆಯ ಜಿಲ್ಲಾಧಿಕಾರಿಗಳ ಆವರಣದಲ್ಲಿನ ಮಹಾನಗರ ಪಾಲಿಕೆಯ ಕೋರ್ಟ ಹಾಲನಲ್ಲಿ ಜನವರಿ 27ರಂದು ನಡೆದ ರಾಯಚೂರು ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲ ಮಂದಿರಗಳು, ಮಸೀದಿಗಳು ಹಾಗೂ ಚರ್ಚ್ ಸೇರಿದಂತೆ ಇನ್ನೀತರ ಎಲ್ಲ ದೇವಸ್ಥಾನಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಜನತೆಗೆ ಉತ್ಸವದ ಬಗ್ಗೆ ಮಾಹಿತಿ ಕೊಡುವ ಕಾರ್ಯವಾಗಬೇಕು. ರಾಯಚೂರು, ಮಾನವಿ, ಸಿಂಧನೂರ, ಲಿಂಗಸೂರು, ದೇವದುರ್ಗ, ಮಸ್ಕಿ, ಸಿರವಾರ ಸೇರಿದಂತೆ ಜಿಲ್ಲೆಯ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿನ ಕಸ ಎತ್ತುವ ವಾಹನಗಳಲ್ಲಿ ಕಡ್ಡಾಯವಾಗಿ ಜಿಂಗಲ್ ಮೂಲಕ ಉತ್ಸವದ ಪ್ರಚಾರ ಕಾರ್ಯ ನಡೆಸಬೇಕು. ಮುಖ್ಯವಾಗಿ ತಾಲೂಕು ಪಂಚಾಯತನ ಎಲ್ಲ ಕಾರ್ಯ ನಿರ್ವಹಣಾಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯ ಎಲ್ಲ ಗ್ರಾಮ ಪಂಚಾಯತಗಳ ಪಿಟಿಓ ಅವರ ಸಭೆ ಕರೆದು ಅವರ ಮೂಲಕ ಗ್ರಾಮ ಮತ್ತು ಹೋಬಳಿ ಮಟ್ಟದಲ್ಲಿ ಸಹ ಕಸ ಎತ್ತುವ ವಾಹನಗಳು ಮತ್ತು ಡಂಗೂರದ ಮೂಲಕ ಉತ್ಸವದ

3ನೇ ಪುಟಕ್ಕೆ



ಲಿಂಗಸೂಗೂರು: ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಗೌಡೂರು 77ನೇ ಗಣರಾಜ್ಯೋತ್ಸವ ಅಂಗವಾಗಿ ಧ್ವಜಾರೋಹಣ. ಮುಖ್ಯ ಗುರುಗಳಾದ ಶ್ರೀಮತಿ ವಿದ್ಯಾವತಿ ಅವರು ಧ್ವಜಾರೋಹಣವನ್ನು ಮಾಡಿದರು ಆನಂತರ ಮಕ್ಕಳ ಡ್ಯಾನ್ಸ್ ಬಣ್ಣದಲ್ಲಿ ಮಿಂಚುತ್ತಿದ್ದರು ಈ ಸಂದರ್ಭದಲ್ಲಿ. ಹೆಚ್ ಡಿ ಎಂ ಸಿ ಮಾಜಿ ಅಧ್ಯಕ್ಷರಾದ. ರಾಜ ಲಕ್ಷ್ಮಣ್ ನಾಯಕ್. ರೈತ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ. ಬಸವರಾಜ್ ಅಂಗಡಿ. ಅಂಬರೀಶ್. ಶಿಕ್ಷಕಗಳಾದ. ಫರೀದ್ ಸರ್ ಕವಿತಾ ಮೇಡಂ ಅಮೀನಾ ಬೇಗಮ್. ಶಿಲ್ಪ. ಕವಿತಾ. ಶಿವಣ್ಣ. ಚೇತನ್. ವಿಜಯಲಕ್ಷ್ಮಿ. ಎಲ್ಲಾ ಶಿಕ್ಷಕರು ಭಾಗಿಯಾಗಿದ್ದರು.

ಬಸವೇಶ್ವರ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ. ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮನೋಭಾವ ಮೂಡಿಸಲು ಸಹಕಾರಿ - ಗಂಗಾಧರ ನಾಯಕ

ಸಿರವಾರ.ಜ.27-

ವಿದ್ಯಾರ್ಥಿಗಳಲ್ಲಿ ಅಡಗಿರುವ ಸೂಕ್ತ ಪ್ರತಿಭೆ' ಅನಾವರಣ ಹಾಗೂ ವೈಜ್ಞಾನಿಕ ಮನೋಭಾವ ಅರಳಿಸಲು ವಿಜ್ಞಾನ ವಸ್ತು ಪ್ರದರ್ಶನ ಉತ್ತಮ ವೇದಿಕೆಯಾಗಿದೆ ಎಂದು ಮಾಜಿ ಶಾಸಕ ಗಂಗಾಧರ ನಾಯಕ ಹೇಳಿದರು.

ತಾಲೂಕಿನ ಬಲ್ಲಟಗಿ ಗ್ರಾಮದ ಬಸವೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಪೈರಾಣಿಕ, ಕಲೆ ಸಂಸ್ಕೃತಿ, ಭಾಷೆ,ವಿಜ್ಞಾನ ತಂತ್ರಜ್ಞಾನವನ್ನು ಉತ್ತಮ ಮಾದರಿಗಳನ್ನು ಪ್ರದರ್ಶಿಸಿದ್ದಾರೆ. ವೈಜ್ಞಾನಿಕ ಮನೋಭಾವ ಅನಾವರಣಕ್ಕೆ ಇಂಥ ಕಾರ್ಯಕ್ರಮಗಳಿಗೆ ಮಹತ್ವ ನೀಡುವುದು ಅವಶ್ಯಕ. ಪ್ರಸ್ತುತ ತಂತ್ರಜ್ಞಾನ, ಪರಿಸರ ಕಾಳಜಿ ಬಗ್ಗೆ ಅರಿವು, ಕ್ರಿಯಾತ್ಮಕ ಮನೋಶಕ್ತಿಗೆ



ಉತ್ತೇಜನ ನೀಡುತ್ತಿರುವುದು ವೈಜ್ಞಾನಿಕ ವಿಷಯಗಳನ್ನು ಅಭಿವ್ಯಕ್ತಗೊಳಿಸಲು ಸಹಕಾರಿಯಾಗುತ್ತದೆ ಎಂದರು.

ಶಾಲೆಯ ಅಧ್ಯಕ್ಷ ಚಂದ್ರಶೇಖರ ಬಲ್ಲಟಗಿ ಮಾತನಾಡಿ, ಪ್ರತಿಭೆ ಹೊರತರಲು ಈ ವೇದಿಕೆ ನಿರ್ಮಿಸಿದ್ದು, ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಂಡಿದ್ದಾರೆ. ವಿಜ್ಞಾನ ಮತ್ತು ಸಮಾಜ

3ನೇ ಪುಟಕ್ಕೆ

ರಾಯಚೂರು ಉತ್ಸವದ ಸೈಕ್ಲಾಥಾನ್: ಉತ್ಸಾಹದಿಂದ 20 ಕಿ.ಮೀ ಸೈಕಲ್ ತುಳಿದ ಸ್ಪರ್ಧಾಳುಗಳು

ರಾಯಚೂರು ,ಜ.27-

ರಾಯಚೂರು ಜಿಲ್ಲಾ ಉತ್ಸವದ ಕ್ಯಾಲೆಂಡರನಂತೆ ಜನವರಿ 27ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ಸೈಕ್ಲಾಥಾನ್ ಆಯೋಜನೆ ಮಾಡಲಾಗಿತ್ತು.

ಸೈಕಲ್ ಮ್ಯಾರಾಥಾನದಲ್ಲಿ ಭಾಗಿಯಾಗಲು ಬೆಳಗ್ಗೆ 6 ಗಂಟೆ ವೇಳೆಗೆ ನಗರದ ಮಹಾತ್ಮ ಗಾಂಧೀಜಿ ಕ್ರೀಡಾಂಗಣದತ್ತ ವೈದ್ಯರು ಸೇರಿದಂತೆ ಸೈಕಲ್ ಅಸೋಸಿಯೇಷನ್ ಸದಸ್ಯರು, ಶಾಲಾ-ಕಾಲೇಜಿನ ವಿದ್ಯಾರ್ಥಿಗಳು, ಯುವಜನರು, ನಾನಾ ಬಗೆಯ ತಮ್ಮ ತಮ್ಮ ನೆಚ್ಚಿನ ಸೈಕಲ್ ಏರಿ ಆಗಮಿಸಿ ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗಿಯಾದರು.

ಬೆಳಗ್ಗೆ, ಸೈಕಲ್ ಏರಿ ಜಿಲ್ಲಾ ಕ್ರೀಡಾಂಗಣದತ್ತ ಆಗಮಿಸಿದ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸೈಕಲ್ ತುಳಿಯುತ್ತ ಸೈಕಲ್



ಮ್ಯಾರಾಥಾನಗೆ ಹಸಿರು ನಿಶಾನೆ ತೋರಿದರು.

ಜಿಲ್ಲಾ ಕ್ರೀಡಾಂಗಣದಿಂದ ಸೈಕಲ್ ಸವಾರಿ ಆರಂಭಿಸಿದ ಸ್ಪರ್ಧಾಳುಗಳು ಬಸವೇಶ್ವರ ವೃತ್ತ, ಜಿಲ್ಲಾ ಪಂಚಾಯತ್, ಕನಕದಾಸ ವೃತ್ತ, ಎಸ್ಪಿ ಕಚೇರಿ ಮಾರ್ಗವಾಗಿ ಯರಮರಸ್, ಬೈಪಾಸ್ ಮೂಲಕ ಯಕ್ಲಾಸಪೂರ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮಾರ್ಗವಾಗಿ ಮರಳಿ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರಿದರು.

ಸೈಕಲ್ ಸವಾರರ ಸುರಕ್ಷತೆ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಎಲ್ಲ ರೀತಿಯ ಸುರಕ್ಷತಾ ಕ್ರಮ ವಹಿಸಲಾಗಿತ್ತು. ಸೈಕಲ್ ಸವಾರರ ಮುಂದೆ ಪೊಲೀಸ್ ಕಾನ್ವೆಗೆ ವ್ಯವಸ್ಥೆ ಮಾಡಲಾಗಿತ್ತು. ಈ ಸ್ಪರ್ಧೆಯಲ್ಲಿ ಬೆಲಂ ಪ್ರಕಾಶ್ ಅವರು ಪ್ರಥಮ ಬಹುಮಾನ, ರಾಘವೇಂದ್ರ ಗುಪ್ತ ದ್ವಿತೀಯ ಬಹುಮಾನ ಮತ್ತು ಸಣ್ಣ ವೀರೇಶ ಅವರು ತೃತೀಯ ಬಹುಮಾನ ಗಿಟ್ಟಿಸಿದರು. ಈ ಸ್ಪರ್ಧೆಯಲ್ಲಿ ಏಕೈಕ ಮಹಿಳಾ ಪಟುವಾಗಿ ಡಾ.ಶಿಲ್ಪ


3ನೇ ಪುಟಕ್ಕೆ

ದೊಡ್ಡ ಕನಸಿರಲಿ ಯಶಸ್ವಿಗೆ ಶ್ರಮ ಇರಲಿ- ಡಾ.ಈರಣ್ಣ ಕೋಸಗಿ

ರಾಯಚೂರು,ಜ.27-

ಎಸ್‌ಎಸ್‌ಎಲ್‌ಸಿ ವಿದ್ಯಾಭ್ಯಾಸದ ಮೈಲುಗಲ್ಲು ಉತ್ತೀರ್ಣ ಆಗುವ ಮೂಲಕ ಮುಂದಿನ ಭವಿಷ್ಯ ಕಟ್ಟಿಕೊಳ್ಳಲು ಅನುಕೂಲವಾಗುತ್ತದೆ. ಈಗಿರುವ ಸಮಯದಲ್ಲಿ ಹೆಚ್ಚು ಸಮಯ ವಿದ್ಯಾಭ್ಯಾಸ ಕೊಡುವ ಮೂಲಕ ಉತ್ತಮ ವಿದ್ಯಾರ್ಥಿಗಳ ಆಗುವ ಜೊತೆಯಲ್ಲಿ ಸಮಾಜಕ್ಕೆ ಕೊಡುಗೆ ಕೊಡುವಲ್ಲಿ ನೀವು ಪ್ರಮುಖರಾಗುತ್ತೀರಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಡಾ. ಈರಣ್ಣ ಕೋಸಗಿ ಹೇಳಿದರು.

ನಗರದ ಪೂರ್ಣಿಮಾ ಪಿಯು ಕಾಲೇಜ್, ವೇದಾಂತ ಡಿಗ್ರಿ ಕಾಲೇಜ್ ಹಾಗೂ ಭಾರತ ಜ್ಞಾನ ವಿಜ್ಞಾನ ಸಮಿತಿ ಸಹಯೋಗದಲ್ಲಿ ಎಸ್



ಎಸ್ ಎಲ್ ಸಿ ಅಭ್ಯಾಸ ಪುಸ್ತಕ ವಿತರಣೆ ಯನ್ನು ಸಗಮ್ ಕುಂಟಾ, ಗಿಲ್ಲೆಸೂಗೂರ್, ಗುಂಜಹಳ್ಳಿ ಹಾಗೂ ಯರ ಗೇರ ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿತರಣೆ ಮಾಡಿ ಮಾತನಾಡಿದರು,

ಮಕ್ಕಳ ಭವಿಷ್ಯ ಮತ್ತು ಮಕ್ಕಳ ಉತ್ತಮ ಜೀವನ ಆಗಬೇಗಂಬ ಕನಸನ್ನು ಕಟ್ಟಿ, ಅವರು ಕಷ್ಟಪಟ್ಟು ನಿಮ್ಮನ್ನು ಶಾಲೆಗೆ ಕಳಿಸಿ, ಒಳ್ಳೆಯ ವಿದ್ಯಾಭ್ಯಾಸ ಮಾಡಲು ಅವರು ಪಡುವ ಶ್ರಮ ಒಮ್ಮೆ ನೋಡಿ ನೀವು ಮುನ್ನಡೆಯಿರಿ ಎಂದು ತಿಳಿಸಿದರು. ವೇದಾಂತ ಕಾಲೇಜಿನ ಪ್ರಾಚಾರ್ಯ ರಾಕೇಶ್ ರಾಜಲಬಂಡಿ ಮಾತನಾಡಿ, ಪರೀಕ್ಷೆ ಎದುರಿಸುವ ಬಗ್ಗೆ ಹಾಗೂ ಯಾವ ರೀತಿ ವಿದ್ಯಾಭ್ಯಾಸ ಮಾಡಿ ದರೆ ನಾವು ಪರೀಕ್ಷೆಯಲ್ಲಿಯಶಸ್ವಿಯಾಗಬಹುದು ಎಂದು ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋ ಪಾದ್ಯರು ಉಪಸ್ಥಿತರಿದ್ದರು .

ಜಿಲ್ಲಾ ಉತ್ಸವದ ಹಿನ್ನೆಲೆ ಸ್ವಚ್ಚತೆಗೆ ಆದ್ಯತೆ ನೀಡಿ-ಸಂತೋಷ್ ರಾಣಿ

ರಾಯಚೂರು,ಜ.27-

ಎಡದೊರೆ ನಾಡು ಜಿಲ್ಲಾ ಉತ್ಸವದ ಹಿನ್ನೆಯಲ್ಲಿ ಪ್ರತಿಯೊಬ್ಬರು ಭಾಗವಹಿಸುವ ಮೂಲಕ ನಗರದಲ್ಲಿ ಸ್ವಚ್ಚತೆಗೆ ಆದ್ಯತೆ ನೀಡಬೇಕು ಎಂದು ಮಹಾ ನಗರ ಪಾಲಿಕೆ ಉಪ ಆಯುಕ್ತೆ ಸಂತೋಷ್ ರಾಣಿ ಹೇಳಿದರು.

ಅವರಿಂದು ನಗರದ ಬಾಲಕಿಯರ ಸರ್ಕಾರಿ ಬಾಲಕಿಯದ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾ ನಗರ ಪಾಲಿಕೆ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಫೆ.5 ರಿಂದ ಮೂರು ದಿನಗಳ ವರೆಗೆ ನಡೆಯುವ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ಸ್ವಚ್ಚತಾ ಕಾರ್ಯ ಕ್ರಮದಲ್ಲಿ ಮಾತನಾಡಿದರು.

ಜಿಲ್ಲೆಯಲ್ಲಿ ಹಲವು ವರ್ಷಗಳ ಬಳಿಕ ಜಿಲ್ಲಾ ಉತ್ಸವ ಆಚರಣೆ ಮಾಡುತ್ತಿದ್ದೇವೆ, ಜಿಲ್ಲಾ ಉತ್ಸವ ಯಶಸ್ವಿಯಾಗಿ ನಡೆಸಿಕೊಡಲು ವಿದ್ಯಾರ್ಥಿಗಳ ಪಾತ್ರ ಪ್ರಮುಖವಾಗಿದೆ, ನಗರದಲ್ಲಿ ಪ್ರಯೊಂದು ಕಡೆಗಳಲ್ಲಿ ಸ್ವಚ್ಚತೆ ಮಾಡುವ ಕೆಲಸ ನಿರಂತರವಾಗಿ ನಡೆಯುತ್ತಿದೆ ಎಂದರು. ಸ್ವಚ್ಚತೆ ಕುರಿತು ಪ್ರತಿ ಯೊಬ್ಬರಿಗೆ ಜಾಗೃತಿ ಮೂಡಿಸ ಬೇಕಾಗಿದೆ, ನಗರದಲ್ಲಿ ಸ್ವಚ್ಚತೆ ಕಾಪಾಡಿಕೊಂಡು ಹೋಗಬೇಕು, ಪ್ರತಿಯೊಬ್ಬ ವಿದ್ಯಾರ್ಥಿಗಳು ಸಹ ಈ ಉತ್ಸವದಲ್ಲಿ ಭಾಗವಹಿಸಿ ಯಶ್ವಿಗೊಳಿಸಲು ಮುಂದಾಗಬೇಕು, ನಗರದಲ್ಲಿ ಸ್ವಚ್ಚತೆಗೆ ಆದ್ಯತೆ ನೀಡುವ ಮೂಲಕ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸದಾ ಶಿವಪ್ಪ, ಸರ್ಕಾರಿ ಮಹಿಳಾ ಪದವಿ ಕಾಲೇಜಿನ ಉಪನ್ಯಾಸರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಅಕ್ರಮ ಮರಳುಗಾರಿಕೆ, ಮಟ್ಕಾ, ಜೂಜು ಚಟುವಟಿಕೆಗಳಲ್ಲಿ ಎಲ್ಲ ಪಕ್ಷದ ಪ್ರಭಾವಿಗಳು ಶಾಮೀಲು: ಜಿ.ಪರಮೇಶ್ವರ್

ಬೆಂಗಳೂರು: ಅಕ್ರಮ ಮರಳು ಗಣಿಗಾರಿಕೆ, ಮಟ್ಕಾ, ಜೂಜು, ಇಸ್ಪೀಟುಗಳಂಥ ಚಟುವಟಿಕೆಗಳಲ್ಲಿ ಎಲ್ಲ ಪಕ್ಷಗಳ ಪ್ರಭಾವಿಗಳೂ ಶಾಮೀಲಾಗಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ತಿಳಿಸಿದರು.

ಜೆಡಿಎಸ್ ಶಾಸಕ ಕರೆಮ್ಮ ನಾಯಕ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಈ ಅಕ್ರಮ ಚಟುವಟಿಕೆಗಳಲ್ಲಿ ಯಾವ ನಾಯಕರು ಭಾಗಿ ಆಗಿದ್ದಾರೆ. ಯಾವ ನಾಯಕರ ನೇತೃತ್ವದಲ್ಲಿನಡೆಯುತ್ತಿದೆ ಅಂತ ವಿವರಣೆ ಕೊಡಲ್ಲ. ಇದರ ಹಿಂದೆ ದೊಡ್ಡವರೇ ಇದ್ದಾರೆ. ಎಲ್ಲ ಪಕ್ಷದವರೂ ಇದರಲ್ಲಿ ಇದ್ದಾರೆ. ಹಾಗಾಗಿ ಇದರ ಬಗ್ಗೆ ನಾನು ವಿವರಣೆ ಕೊಡುವುದಿಲ್ಲ ಎಂದರು.



ಈ ವೇಳೆ, ಯಾರು ಯಾರು ದೊಡ್ಡವರು ಭಾಗಿಯಾಗಿದ್ದಾರೆಂದು ಬಹಿರಂಗ ಪಡಿಸಿ, ಮುಲಾಜಿಲ್ಲದೇ ಕ್ರಮ ವಹಿಸಲು ಸುರೇಶ್ ಕುಮಾರ್ ಆಗ್ರಹಿಸಿದ್ರು. ಇದಕ್ಕೆ ಪ್ರತಿಕ್ರಿಯಿಸಿದ ಜಿ.ಪರಮೇಶ್ವರ್, ನಮಗೆ ಯಾವುದೇ ಮುಲಾಜಿಲ್ಲ. ಶಾಸಕರ ಜೊತೆಗೂ ಸಭೆ ಕರೆಯುತ್ತೇನೆ. ಪರಿಸ್ಥಿತಿ ಅವಲೋಕಿಸಿ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಭರವಸೆ ನೀಡಿದರು.

ಇದಕ್ಕೂ ಮುಂಚೆ ಮಾತನಾಡಿದ ಶಾಸಕ ಕರೆಮ್ಮ ನಾಯಕ್, ಅಕ್ರಮ ಮರಳು ದಂಧೆ,

3ನೇ ಪುಟಕ್ಕೆ

ಜಿಲ್ಲಾ ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವ ಸಂಭ್ರಮ I ಸಾಧಕರಿಗೆ ಸನ್ಮಾನ

ರಾಜ್ಯದ ಅಭಿವೃದ್ಧಿಗೆ ಯುವ ಜನಾಂಗ ಸನ್ನದ್ಧರಾಗಬೇಕಿದೆ : ಸಚಿವ ತಿಮ್ಮಾಪೂರ

ಬಾಗಲಕೋಟೆ,ಜ.27-

ನಮ್ಮ ರಾಜ್ಯ ಅಭಿವೃದ್ಧಿಯ ವೇಗದಲ್ಲಿ ತೀವ್ರ ಮುನ್ನಡೆ ಸಾಧಿಸಬೇಕಾದರೆ ಯುವ ಜನಾಂಗ ಸನ್ನದ್ಧರಾಬೇಕಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತದಿಂದ ಹಮ್ಮಿಕೊಂಡ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ, ಮಾತನಾಡಿದ ಅವರು ಕರ್ನಾಟಕವನ್ನು ದೇಶದ ಪ್ರಗತಿಪರ ರಾಜ್ಯವನ್ನಾಗಿ ರೂಪಿಸಬೇಕಾದರೆ ಎಲ್ಲರೂ ಕ್ರಿಯಾಶೀಲರಾಗಿ ದಣಿವರಿಯದೆ ದುಡಿಯಬೇಕಿದೆ. ರಾಷ್ಟ್ರ ಕಟ್ಟುವ ಕಾರ್ಯದಲ್ಲಿ ತ್ಯಾಗ, ಬಲಿದಾನ, ಪ್ರಾಣಾರ್ಪಣೆ ಮಾಡಿದ ಅಸಂಖ್ಯಾತ ದೇಶ ಭಕ್ತರನ್ನು, ಮಹಾನ್ ಮೇಧಾವಿಗಳನ್ನು ನೆನಪಿಸಬೇಕಾಗುತ್ತದೆ. ಇದು ನಮ್ಮೆಲ್ಲರ ಕರ್ತವ್ಯ ಕೂಡಾ ಆಗಿದೆ ಎಂದರು.

ವಸತಿ ಇಲಾಖೆ, ಕೊಳಗೇರಿ ಅಬಿವೃದ್ದಿ ಮಂಡಳಿ ವತಿಯಿಂದ ರಾಜ್ಯಾದ್ಯಂತ ನಿರ್ಮಿಸಿರುವ 42,345 ಮನೆಗಳ ಪೈಕಿ ಬಾಗಲಕೋಟೆ ಜಿಲ್ಲೆಯ ರಬಕವಿಯಲ್ಲಿ 192 ಮನೆಗಳ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಪ್ರವಾಹ, ಅತೀಯಾದ ಮಳೆಯಿಂದ ಹಾನಿಯಾದ ಬೆಳೆಗಳಿಗೆ ಒಟ್ಟು 139.57 ಕೋಟಿ ರೂ.ಗಳ ಇನಪುಟ್ ಸಬ್ಸಿಡಿ ಪರಿಹಾರವನ್ನು ನೇರವಾಗಿ ಜಿಲ್ಲೆಯ 1.10 ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ವಿವಿಧ ಹಂತಗಳಲ್ಲಿ ಡಿಬಿಟಿ ಮೂಲಕ ಪಾವತಿಸಲಾಗಿದೆ ಎಂದು ತಿಳಿಸಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಪ್ರಸಕ್ತ 2025-26ನೇ ಸಾಲಿಗೆ 3.63 ಕೋಟಿ ರೂ.ಗಳ ಮೊತ್ತದ ಸಹಾಯಧನವನ್ನು 39 ಕೈಗಾರಿಕೆಗಳಿಗೆ ಬಿಡುಗಡೆ ಮಾಡಲಾಗಿದೆ. ಸಣ್ಣ ಪುಟ್ಟ ಉದ್ದಿಮೆ ಅಭಿವೃದ್ದಿಗೆ ಜಿಲ್ಲೆಯಲ್ಲಿ 14 ಕಾರ್ಯಾಗಾರ ನಡೆಸಿ, ಕೇಂದ್ರ ಸರಕಾರದ ಯೋಜನೆಯಡಿ ಅಂದಾಜು 60 ಕೋಟಿ ರೂ.ಗಳ ಬಂಡವಾಳ ಹೂಡಿಕೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.



ಮಹಾಲಿಂಗಪೂರದಲ್ಲಿ ನೂರು ವಿದ್ಯಾರ್ಥಿಗಳ ಸಾಮರ್ಥ್ಯವಿರುವ ಡಾ.ಬಿ.ಆರ್.ಅಂಬೇಡ್ಕರ ಸರಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದ ನೂತನ ಕಟ್ಟವನ್ನು ಲೋಕಾರ್ಪಣೆಗೊಳಿಸಲಾಗಿದೆ ಎಂದು ತಿಳಿಸಿದರು.

ಎನ್.ಆರ್.ಎಲ್.ಎಂ ಯೋಜನೆಯಡಿ ಸ್ವ-ಸಹಾಯ ಸಂಘಗಳ ಮಹಿಳೆಯರು ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಪ್ರಸಕ್ತ ಸಾಲಿನಲ್ಲಿ 333 ಸ್ವ-ಸಹಾಯ ಗುಂಪುಗಳಿಗೆ 499.50 ಲಕ್ಷ ರೂ.ಗಳ ಸಮುದಾಯ ಬಂಡವಾಳ ನಿಧಿ ಅನುದಾನ ಬಿಡುಗಡೆ ಮಾಡಲಾಗಿದೆ. ಸ್ವ-ಸಹಾಯ ಸಂಘಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯ ಹಾಗೂ ಉತ್ಪನ್ನಗಳ ಪ್ರಚಾರಕ್ಕಾಗಿ ಜಿಲ್ಲೆಯ ಬನಶಂಕರಿ ಜಾತ್ರೆ ಹಾಗೂ ಚಾಲುಕ್ಯ ಉತ್ಸವ ಪ್ರಯುಕ್ತ 2 ಜಿಲ್ಲಾ ಮಟ್ಟದ ಸರಸ್ ಮೇಳ ಆಯೋಜನೆ ಮಾಡಿ ಮಹಿಳೆಯರು ತಯಾರಿಸುತ್ತಿರುವ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯ ಒದಗಿಸಲು ಪ್ರೋತ್ಸಾಹ ನೀಡಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ವಿಧಾನ ಪರಿಷತ್ ಶಾಸಕರಾದ ಪಿ.ಎಚ್.ಪೂಜಾರ, ಹನಮಂತ ನಿರಾಣಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ದಡ್ಡಿ, ಬುಡಾದ ಅಧ್ಯಕ್ಷ ಅಬ್ದುಲ್‌ರಜಾಕ ಬೇನೂರ, ಜಿಲ್ಲಾಧಿಕಾರಿ ಸಂಗಪ್ಪ. ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಯುಕೆಪಿ ಮಾಹಾ ವ್ಯವಸ್ಥಾಪಕ ಗಜಾನನ ಬಾಲೆ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಅಹಿರೆ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ತಹಶೀಲ್ದಾರ ವಾಸುದೇವ್ ಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಂಗಮೇಶ ಸನತಂಗಿ ಕಾರ್ಯಕ್ರಮ ನಿರೂಪಿಸಿದರು.

ವಿವಿಧ ಸಾಧಕರಿಗೆ ಸನ್ಮಾನ: ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು. ಸಿದ್ದು ಮೂಲಿಮನಿ (ಸಾಹಿತ್ಯ ಕ್ಷೇತ್ರ), ಬಸವರಾಜ ಡಂಬಳ (ಸಂಗೀತ), ಮಹಾದೇವ ಕಲ್ಯಾಣಿ (ಕರಡಿ ಮಜಲು), ವೆಂಕಪ್ಪ ಕ್ವಾನ್ಯಾಗೋಳ (ಡೊಳ್ಳಿನಪದ), ಹನಮಂತ ಭಜಂತ್ರಿ, (ಕರಡಿ ಮಜಲು), ರಮೇಶ ಬಡಿಗೇರ (ಭಜನೆ), ಲೇಶಪ್ಪ ಬಸರಕೋಡ (ಪುರವಂತಿಕೆ), ಗಿರಿಮಲ್ಲಪ್ಪ ಪೂಜಾರಿ (ಚಿತ್ರಕಲೆ), ಭಾರತಿ ಹಿರೇಮಠ (ಅಂಗಾಂಗ ದಾನ), ಮಹಾದೇವ ಮಳ್ಳಿಗೇರಿ (ಕೃಷಿ), ಅಡಿವೇಶ ಡೊಂಕಪ್ಪಗಳ, ರಮೇಶ ನಾಯ್ಕರ (ಸಮಾಜ ಸೇವೆ), ವಿನೋದ ಸಂದಿಮನಿ, ಪ್ರಭಾಸ ತಳವಾರ, ಗಂಗಾ ದಂಡಿನ, ಹನಮಂತ ಹುಲ್ಲಿಕೇರಿ, ಏಕನಾಥ ದಿವಟಗಿ (ಕ್ರೀಡೆ), ಸಂತೋಷ ಹಜೇರಿ (ಛಾಯಾಗ್ರಾಹಕ), ಅಭಯ ಮನಗೂಳಿ, ಗುರು ಹಿರೇಮಠ, ಹೇಮಾ ಕಡಿವಾಳ (ಮಾಧ್ಯಮ),



ಬಳ್ಳಾರಿ: ಜಿಲ್ಲಾಡಳಿತ ಕಚೇರಿಗಳಲ್ಲಿ 77ನೇ ಗಣರಾಜ್ಯೋತ್ಸವ ದಿನಾಚರಣೆ

ಬಳ್ಳಾರಿ,ಜ.27-

ನ'ಗ'ರ'ದ' ಡಾ.ರಾಜ್‌ಕುಮಾರ್ ರಸ್ತೆಯ ನೂತನ ಜಿಲ್ಲಾಡಳಿತ ಭವನ ಮತ್ತು ರೈಲ್ವೇ ನಿಲ್ದಾಣ ರಸ್ತೆಯ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಸೋಮವಾರ 77ನೇ ಗಣರಾಜ್ಯೋತ್ಸವ ದಿನಾಚರಣೆ ಆಚರಿಸಲಾಯಿತು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು 77ನೇ ಗಣರಾಜ್ಯೋತ್ಸವ ದಿನದ ಅಂಗವಾಗಿ ಎರಡು ಕಚೇರಿಗಳ ಆವರಣದಲ್ಲಿ ಧ್ವಜಾರೋಹಣಾ ನೆರವೇರಿಸಿ, ಬಳಿಕ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು. ಇದೇ ವೇಳೆ ಎಲ್ಲರಿಗೂ 77ನೇ ಗಣರಾಜ್ಯೋತ್ಸವ ದಿನಾಚರಣೆಯ ಶುಭಾಷಯ ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮುಹಮ್ಮದ್ ಎನ್.ಝುಬೇರ್, ಸಹಾಯಕ ಆಯುಕ್ತ ರಾಜೇಶ್.ಹೆಚ್.ಡಿ., ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್, ತಹಶೀಲ್ದಾರ ಟಿ.ರೇಖಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ-ಸಿಬ್ಬಂದಿ ವರ್ಗ ಹಾಜರಿದ್ದರು.

ಬಿಜೆಪಿ ಕಾರ್ಯಾಲಯದಲ್ಲಿ ಸಂಭ್ರಮದ ಪ್ರಜಾರಾಜ್ಯೋತ್ಸವ

2047 ಸದೃಡ ವಿಕಸಿತ ಭಾರತ ನಿರ್ಮಾಣ : ಗದ್ದಿಗೌಡರ

ಬಾಗಲಕೋಟೆ,ಜ.27-

ಭಾರತ ಎಲ್ಲ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದು 2047 ಕ್ಕೆ ದೇಶ ಶಕ್ತಿಶಾಲಿ ಸದೃಡ ವಿಕಸಿತ ಭಾರತವಾಗಿ ನಿರ್ಮಾಣವಾಗಲಿದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ಅವರು ನಗರದ ಶಿವಾನಂದ ಜಿನ್‌ನಲ್ಲಿ ಭಾರತೀಯ ಜನಾತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ 77ನೇ ಗಣರಾಜ್ಯೋತ್ಸವ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು 1950 ಜನವರಿ 26 ರಂದು ಭಾರತದ ಸಂವಿಧಾನವು ಜಾರಿಗೆ ಬಂದಿತು, ಅಂದಿನಿಂದ ಭಾರತವನ್ನು ಸಾರ್ವಭೌಮ, ಪ್ರಜಾಪ್ರಭುತ್ವ ಗಣರಾಜ್ಯವೆಂದು ಘೋಷಿಸಲಾಯಿತು, ಇಂದು ನಮಗೆ ಸಂವಿಧಾನಾತ್ಮಕವಾಗಿ ಮತದಾನದ ಹಕ್ಕು ಸಿಕ್ಕಿದೆ, ನಮ್ಮ ಹಕ್ಕನ್ನು ಚಲಾಯಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ, ದೇಶದಲ್ಲಿ ಸಾಕಷ್ಟು ಧರ್ಮ, ಸಂಸ್ಕೃತಿಗಳು ಇದ್ದರು ನಾವೆಲ್ಲ ಭಾರತಿಯರು, ಒಂದೆ ತಾಯಿಯ ಮಕ್ಕಳು ನಾವೆಲ್ಲರು ಒಂದೆ ಭಾವ ಇರಲಿ, ಇಂದು ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತ ಎಲ್ಲ ಕ್ಷೇತ್ರಗಳಲ್ಲಿಯೂ



ಮುಂಚೂಣಿಯಲ್ಲಿದೆ, ವಿಕಸಿತ ಭಾರತ ಪರಿಕಲ್ಪನೆಯಲ್ಲಿ ಶಕ್ತಿಶಾಲಿ ದೇಶ ಕಟ್ಟಲು ಎಲ್ಲರೂ ಭಾಗವಹಿಸುವಿಕೆ ಅಗತ್ಯವಾಗಿದೆ, ದೇಶ 2047ಕ್ಕೆ ಸದೃಡ ವಿಕಸಿತ ಭಾರತವಾಗಿ ನಿರ್ಮಾಣಗೊಳ್ಳಲಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಉಪಮುಖ್ಯಮಂತ್ರಿ ಚಿತ್ರದುರ್ಗದ ಸಂಸದರಾದ ಗೋವಿಂದ ಕಾರಜೋಳ, ಮಾಜಿ ಶಾಸಕರಾದ ಡಾ.ವೀರಣ್ಣ ಚರಂತಿಮಠ, ಬೆಳಗಾವಿ ವಿಭಾಗದ ಉಸ್ತುವಾರಿಯಾದ ಅರುಣ ಶಾಹಪುರ, ಜಿ.ಎನ್,ಪಾಟೀಲ, ಡಾ.ಎಂ.ಎಸ್.ದಡ್ಡೆನ್ನವರ, ಜಿಲ್ಲಾ ಪ್ರದಾನ ಕಾರ್ಯದರ್ಶಿ ರಾಜು ನಾಯ್ಕರ, ಬಸವರಾಜ ಯಂಕಂಚಿ, ರಾಜು ರೇವಣಕರ, ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಯಲ್ಲಪ್ಪ ಬೆಂಡಿಗೇರ, ಬಸಲಿಂಗಪ್ಪ ನಾವಲಗಿ, ಸತ್ಯನಾರಾಯಣ ಹೆಮಾದ್ರಿ, ಶಿವಾನಂದ ಟವಳಿ, ಭಾಗೀರಥಿ ಪಾಟೀಲ, ಜ್ಯೋತಿ ಭಜಂತ್ರಿ, ಶೋಭಾ ರಾವ, ಶಶಿಕಲಾ ಮಜ್ಜಗಿ, ಸೇರಿದಂತೆ ಬಿಜೆಪಿಯ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಭಾರತ ಮಾತೆ ಹಾಗೂ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ ಅಂಬೇಡ್ಕರ ಅವರ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಲಾಯಿತು, ನಂತರ ನಗರದಲ್ಲಿರುವ ಡಾ. ಬಿ.ಆರ.ಅಂಬೇಡ್ಕರ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನಗಳನ್ನು ಸಲ್ಲಿಸಲಾಯಿತು.

77ನೇ ಗಣರಾಜ್ಯೋತ್ಸವ ದಿನಾಚರಣೆ: ಜಿಲ್ಲಾಡಳಿತ ಭವನದಲ್ಲಿ ರಾಷ್ಟ್ರ ಧ್ವಜಾರೋಹಣ

ಸಂವಿಧಾನ ಪ್ರಜಾಪ್ರಭುತ್ವದ ಆತ್ಮ: ಡಾ.ಸುರೇಶ ಬಿ.ಇಟ್ನಾಳ

ಕೊಪ್ಪಳ ಜ.27-

ಸಂವಿಧಾನವು ಪ್ರಜಾಪ್ರಭುತ್ವದ ಆತ್ಮವಾಗಿದ್ದು, ನಾವೆಲ್ಲರೂ ಸಂವಿಧಾನದ ಮೌಲ್ಯಗಳನ್ನು ಅರಿತುಕೊಂಡು ದೇಶದ ಅಭಿವೃದ್ದಿಗೆ ಒತ್ತು ನೀಡೋಣ ಎಂದು ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಹೇಳಿದರು.

ಅವರು ಸೋಮವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆದ 77ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ನಮ್ಮೆಲ್ಲರಿಗೂ ಗೊತ್ತಿರುವ ಹಾಗೆ 1947ರ ಆಗಸ್ಟ್ 15ರಂದು ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿತು. 1950ರ ಜನವರಿ 26 ರಂದು ಸಂವಿಧಾನವನ್ನು ಜಾರಿಗೆ ತರಲಾಯಿತು. ಇದರ ಹಿನ್ನೆಲೆಯನ್ನು ನೋಡುವುದಾದರೆ, ಬ್ರಿಟಿಷರ ಕಾಲದಲ್ಲಿ ನಮ್ಮದೇ ಸಂವಿಧಾನ ಇರಲಿಲ್ಲ. ನಮ್ಮದೇ ಸಂವಿಧಾನ ತರುವ ಪ್ರಯತ್ನವಾಗಿ 1929ರ ಲಾಹೋರ್ ಅಧಿವೇಶನದಲ್ಲಿ ಪೂರ್ಣ ಸ್ವರಾಜ್ ಬಗ್ಗೆ ನಿರ್ಣಯ ಕೈಗೊಳ್ಳಲಾಯಿತು. 1930 ಜನವರಿ 26 ರಂದು ಪೂರ್ಣ ಸ್ವರಾಜ್ ಘೋಷಣೆ ಮಾಡಲಾಯಿತು. ಪ್ರಜೆಗಳಿಂದ, ಪ್ರಜೆಗಳಿಗಾಗಿ ಮತ್ತು ಪ್ರಜೆಗಳಿಗೋಸ್ಕರ ಪ್ರಜಾಪ್ರಭುತ್ವ ತರುವ ಧ್ಯೇಯದಿಂದ



ಡಾ.ಬಿ.ಆರ್.ಅಂಬೇಡ್ಕರ್ ಅವರ ನೇತೃತ್ವದಲ್ಲಿ ಸಂವಿಧಾನ ಕರಡು ರಚನಾ ಸಮಿತಿಯನ್ನು ರಚಿಸಲಾಯಿತು. ಸುಮಾರು 2 ವರ್ಷ 11 ತಿಂಗಳು 18 ದಿವಸ ಜಗತ್ತಿನ ಎಲ್ಲ ದೇಶಗಳ ಸಂವಿಧಾನವನ್ನು ಅಧ್ಯಯನ ಮಾಡಿದ ನಂತರ ಅಂಬೇಡ್ಕರ್ ಅವರು ಬೃಹತ್ ಸಂವಿಧಾನವನ್ನು ರಚಿಸಿದರು. 1949 ನವೆಂಬರ್ 26 ರಂದು ಸಂವಿಧಾನವನ್ನು ಅಂಗೀಕರಿಸಲಾಯಿತು. 1950 ಜನವರಿ 26 ರಂದು ಸಂವಿಧಾನವನ್ನು ಜಾರಿಗೆ ತರಲಾಯಿತು. ಸಂವಿಧಾನ ಪ್ರಜಾಪ್ರಭುತ್ವದ ಆತ್ಮ. ನಮ್ಮ ಸಂವಿಧಾನವು ಸಮಾನತೆ, ಭ್ರಾತೃತ್ವ, ವ್ಯಕ್ತಿಗೌರವ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಒಳಗೊಂಡಿದ್ದು, ಜಗತ್ತಿನ ಎಲ್ಲ ಸಂವಿಧಾನಗಳಿಗಿಂತ ಶ್ರೇಷ್ಠ ಮೌಲ್ಯಗಳನ್ನು ನಮ್ಮ ಸಂವಿಧಾನ ಹೊಂದಿದೆ. ನಾವೆಲ್ಲರೂ ಸಂವಿಧಾನದ ಮೌಲ್ಯಗಳನ್ನು ಅರಿತು ದೇಶದ ಅಭಿವೃದ್ದಿಗೆ ಸಹಕರಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿ.ಪಂ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ್, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಅಮೀನ್ ಅತ್ತಾರ, ಆಹಾರ ಇಲಾಖೆ ಉಪನಿರ್ದೇಶಕ ಸೋಮಶೇಖರ ಬಿರಾದರ್, ಜಿಲ್ಲಾ ತರಬೇತಿ ಕೇಂದ್ರದ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಿರುಗುಪ್ಪದಲ್ಲಿ 77ನೇ ಗಣರಾಜ್ಯೋತ್ಸವ ಸಂಭ್ರಮಾಚರಣೆ



ಸಿರುಗುಪ್ಪ ,ಜ.27-

ನಗರದ ತಾಲೂಕು ಕ್ರೀಡಾಂಗಣದಲ್ಲಿ ತಾಲೂಕಾಡಳಿತ, ತಾಲೂಕು ಪಂಚಾಯಿತಿ ಹಾಗೂ ನಗರಸಭೆಯ ಸಹಯೋಗದಲ್ಲಿ ನಡೆದ 77ನೇ ಗಣರಾಜ್ಯೋತ್ಸವ ಸಂಭ್ರಮಾಚರಣೆಯ ನಿಮಿತ್ತ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷರು ಹಾಗೂ ತಹಶೀಲ್ದಾರ್ ಆದ ಗೌಸಿಯಾ ಬೇಗಂ ಅವರು ರಾಷ್ಟ್ರೀಯ ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿ 1947ರ ಆಗಸ್ಟ್ 15 ರಂದು ನಮಗೆ ಸ್ವಾತ್ಯಂತ್ರ ಲಭಿಸಿದ್ದರೂ ಅನೇಕ ಗಣಗಳಾಗಿ ವಿಂಗಡವಾಗಿತ್ತು. ನಂತರ ಎಲ್ಲಾ ಗಣಗಳನ್ನು ಒಗ್ಗೂಡಿಸಿ 1950 ಜನವರಿ 26ರಂದು ಗಣತಂತ್ರ ರಾಷ್ಟ್ರವನ್ನಾಗಿ ಸಲಾಗಿತು. ದೇಶದಲ್ಲಿನ ವೈವಿದ್ಯತೆಯಲ್ಲಿನ ಏಕತೆ, ಸಮಾನತೆ ಹಿತದೃಷ್ಟಿಯಿಂದ ನಾವೆಲ್ಲರೂ ಒಗ್ಗಟ್ಟಾಗಿ ಇರುತ್ತೇವೆಂದು ಪ್ರತಿಜ್ಞೆಯನ್ನು ಮಾಡೋಣವೆಂದರು.

ಧ್ವಜವಂದನೆ ಸ್ವೀಕರಿಸಿದ ಶಾಸಕ ಬಿ.ಎಮ್.ನಾಗರಾಜ ಅವರು ಮಾತನಾಡಿ ತಾಲೂಕಿನ ಸರ್ವಾಂಗೀಣ ಅಭಿವೃದ್ದಿಗಾಗಿ ಅನೇಕ ಕಾರ್ಯಕ್ರಮಗಳ ಮುಖಾಂತರ ನಾನಾ ಇಲಾಖೆಗಳ ಹಂತ ಹಂತವಾಗಿ ಕಾಮಗಾರಿಗಳನ್ನು ಮುಗಿಸುವ ಪ್ರಯತ್ನ ನಮ್ಮ ಸರ್ಕಾರದ ವತಿಯಿಂದ ಮಾಡುತ್ತಿದ್ದೇವೆ.

ತುಂಗಾಭದ್ರ ಜಲಾಶಯದ ಭವಿಷ್ಯದ ಭದ್ರತೆಗೆಗಾಗಿ ಎರಡನೇ ಬೆಳೆಯ ತ್ಯಾಗ ಮಾಡಿ ಸಹಕರಿಸಿದ ರೈತರಿಗೆ ಜೂನ್ ಇಲ್ಲವೇ ಜುಲೈ ತಿಂಗಳಲ್ಲಿ ತುಂಗಾಭದ್ರ ಜಲಾಶಯದ ಗೇಟ್ ಅಳವಡಿಕೆಯ ಕಾರ್ಯ ಮುಗಿಸಿ ನೀರಾವರಿ ಅನುಕೂಲ ಮಾಡಿಕೊಡಲಾಗುವುದೆಂದು ತಿಳಿಸಿದರು.

ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಸ್ಕೌಟ್ಸ್ ಮತ್ತು ಟ್ರೂಪ್ ಹಾಗೂ ಪೌರ ಕಾರ್ಮಿಕರಿಂದ ಪಥ ಸಂಚಲನ ಜರುಗಿತು. ಶಾಲಾ ವಿದ್ಯಾರ್ಥಿಗಳಿಂದ ದೇಶಭಕ್ತಿ ಗೀತೆಗಳ ನೃತ್ಯ ಇನ್ನಿತರ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಭಾಗಿಯಾದ ವಿದ್ಯಾರ್ಥಿಗಳ ತಂಡಕ್ಕೆ ಪುರಸ್ಕರಿಸಲಾಯಿತು.

ಪಥಸಂಚಲನದಲ್ಲಿ ವಿಜೇತವಾದ ತಂಡಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಮಹಾನ್ ವ್ಯಕ್ತಿಗಳ ವೇಷದಲ್ಲಿನ ಪುಟಾಣಿ ವಿದ್ಯಾರ್ಥಿಗಳು ನೆರೆದವರ ಗಮನ ಸೆಳೆದರು.

ಇದೇ ವೇಳೆ ಪೋಲೀಸ್ ಉಪಾಧೀಕ್ಷಕ ಮಾಲತೇಶ ಕೂನಬೇವ, ಪೌರಾಯುಕ್ತ ಗಂಗಾಧರ, ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕ ವರ್ಗ ಸೇರಿದಂತೆ ಸಾರ್ವಜನಿಕರು ಇದ್ದರು.

ಬಳ್ಳಾರಿ: ಜಿಲ್ಲಾ ನ್ಯಾಯಾಲಯದಲ್ಲಿ ಧ್ವಜಾರೋಹಣ

ಕಾಯ್ದೆ-ಕಾನೂನುಗಳಿಗೆ ಭದ್ರ ಬುನಾದಿ ಸಂವಿಧಾನ-ನ್ಯಾ.ಕೆ.ಜಿ ಶಾಂತಿ

ಬಳ್ಳಾರಿ,ಜ.27-

ಪ್ರತಿಯೊಂದು ಕಾಯ್ದೆ-ಕಾನೂನುಗಳಿಗೆ ಭದ್ರ ಬುನಾದಿ ಎಂದರೆ ಅದು ಸಂವಿಧಾನವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಹೇಳಿದರು.

ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಆವರಣದಲ್ಲಿ ಸೋಮವಾರ 77ನೇ ಗಣರಾಜ್ಯೋತ್ಸವ ದಿನಾಚರಣೆ ನಿಮಿತ್ತ ಧ್ವಜಾರೋಹಣ ನೆರವೇರಿಸಿ, ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಗಳಿಗೆ ಪುಷ್ಪರ್ಚಾನೆ ಸಲ್ಲಿಸಿ ಬಳಿಕ ಅವರು ಮಾತನಾಡಿದರು.

ಸಂವಿಧಾನ ಆಶಯದಡಿ ಪ್ರತಿಯೊಂದು ಕಾಯ್ದೆ ಮತ್ತು ಕಾನೂನುಗಳನ್ನು ರಚಿಸಲಾಗಿದೆ. ಹಾಗಾಗಿ ಪ್ರತಿಯೊಬ್ಬರೂ ಕಾನೂನನಡಿ ನಡೆದುಕೊಳ್ಳುವುದು. ಅವುಗಳನ್ನು ಗೌರವಿಸುವುದು ಪ್ರತಿಯೊಬ್ಬರ ಕಾಳಜಿ ಪರ ಕಾರ್ಯವಾಗಿದೆ ಎಂದರು.

ವಿಶ್ವದ ಅತ್ಯಂತ ಬೃಹತ್ ಲಿಖಿತ ಸಂವಿಧಾನವು ಭಾರತ ಸಂವಿಧಾನವಾಗಿದೆ. ಸಾಮಾಜಿಕ ನ್ಯಾಯ, ಸಾಮಾನತೆಯ ನ್ಯಾಯ, ಭ್ರಾತೃತ್ವ ಮತ್ತು ಸ್ವಾತಂತ್ರ್ಯ ನ್ಯಾಯವನ್ನು ಪ್ರಜೆಗಳಿಗೆ ಕಲ್ಪಿಸಿದೆ. ಸಂವಿಧಾನ ರಚನೆಗೆ ಕಾರಣೀಭೂತರಾದ ಮಹನೀಯರನ್ನು ಸ್ಮರಿಸಿ



ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅದರಲ್ಲಿ ಭಾರತರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಸದಾ ಸ್ಮರಿಸಲೇಬೇಕು ಎಂದು ಈ ಸಂದರ್ಭದಲ್ಲಿ ಹೇಳಿದರು.

ಸಂವಿಧಾನದ ಮೂಲಭೂತ ಹಕ್ಕುಗಳಿಂದ ದೇಶದ ನಾಯಕನನ್ನು ಆಯ್ಕೆ ಮಾಡುವ ಅವಕಾಶ ನೀಡಿದೆ. ಅದನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳುವುದು ಪ್ರತಿಯೊಬ್ಬ ಪ್ರಜೆಯ ಆದ್ಯ ಕರ್ತವ್ಯ ಆಗಿದೆ. ಪ್ರತಿಯೊಬ್ಬರು ಗೌರವದಿಂದ ಜೀವಿಸುವ ಹಕ್ಕು ಹೊಂದಿದ್ದು, ಎಲ್ಲರು ಪರಸ್ಪರ ಗೌರವದಿಂದ ಕಾಣಬೇಕು ಎಂದರು.

ದೇಶದ ಯುವಜನರು ಬೆನ್ನೆಲುಬು ಇದ್ದಂತೆ. ಮಕ್ಕಳು ಆಸ್ತಿ, ಅವರಿಗೆ ಉತ್ತಮ ಮಾರ್ಗದರ್ಶನ ಮೂಲಕ ಪ್ರಜ್ಞಾವಂತರನ್ನಾಗಿ ಮಾಡುವುದು ಶಾಲಾ ಶಿಕ್ಷಕರು, ಪೋಷಕರ ಕರ್ತವ್ಯವಾಗಿದೆ. ಮತ್ತು ಪ್ರಜೆಗಳು ಕಾನೂನಿನ ನಿಯಮಗಳನ್ನು ಸರಿಯಾಗಿ ಪಾಲನೆ ಮಾಡಬೇಕು. ದೇಶದ ಪ್ರಗತಿಗೆ ಅಮೂಲ್ಯ ಕೊಡುಗೆ ನೀಡಲು ಅವರನ್ನು ಬೆಳೆಸಬೇಕು. ದೇಶದ ಪ್ರಗತಿಗೆ ಪಾಲುದಾರರಾಬೇಕು ಎಂದರು.

ನ್ಯಾಯಾಧೀಶರು, ವಕೀಲರು, ಸಿಬ್ಬಂದಿ ವರ್ಗ ಎಲ್ಲರೂ ಒಡಗೂಡು ನೊಂದವರಿಗೆ ಸಕಾಲದಲ್ಲಿ ನ್ಯಾಯ ದೊರಕಿಸಿಕೊಡುವ ಕರ್ತವ್ಯ ನಮ್ಮ ಮೇಲಿದೆ. ಬಡವರ, ನೊಂದವರ, ಅಸಹಾಯಕರಿಗೆ ಕಾನೂನು ನೆರವಿನಡಿ ಸಹಾಯ ಮಾಡುವ ಧರ್ಮ ಅಳವಡಿಸಿಕೊಳ್ಳೋಣ ಎಂದು ಕರೆ ನೀಡಿದರು.

ನ್ಯಾಯಾಧೀಶರು, ಅಧಿಕಾರಿ-ಸಿಬ್ಬಂದಿ ವರ್ಗ, ಆಧುನಿಕ ತಂತ್ರಜ್ಞಾನದ (ಎಐ) ಕುರಿತು ಅರಿವು ಹೊಂದಬೇಕು. ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡೋಣ, ದೇಶ ಕಟ್ಟುವ ಶಿಲ್ಪಿಗಳಾಗೋಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ, 1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಿ.ಪ್ರಮೋದ, ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 3ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಡಿ.ಪಿ ಕುಮಾರ ಸ್ವಾಮಿ, 4ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಪ್ರಿನ್ಸಿಪಲ್ ಕೌಟುಂಬಿಕ ನ್ಯಾಯಾಧೀಶರಾದ ವೆಂಕಟೇಶ್, ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ರಾಜೇಶ್.ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ಸಿದ್ದಲಿಂಗಯ್ಯ ಗಂಗಾಧರ ಮಠ, 2ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ವಿನುತಾ ಬಿ.ಎಸ್., 3ನೇ ಅಪರ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ಮುದುಕಪ್ಪ ಒಡನ್ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಅಧಿಕಾರಿ-ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



ಕಲಬುರಗಿ, :77ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಕಲಬುರಗಿ ಜಿಲ್ಲಾ ಪಂಚಾಯತ ಕಚೇರಿಯಲ್ಲಿ ಸೋಮವಾರ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾ ನ್ಯಾಯಾಲಯದಲ್ಲಿ ಅಳವಡಿಸಲಾದ ಲಿಫ್ಟ್ ಸೌಲಭ್ಯಕ್ಕೆ ಚಾಲನೆ ನೀಡಿದ ಸಚಿವ ಈಶ್ವರ ಬಿ.ಖಂಡ್ರೆ


ಬೀದರ,ಜ.27-

ಸುಮಾರು ರೂ. 25 ಲಕ್ಷ ರೂ. ಅನುದಾನದಡಿ ಅಳವಡಿಸಲಾದ ಈ ಲಿಫ್ಟ್, ನ್ಯಾಯಾಲಯಕ್ಕೆ ಬರುವ ವೃದ್ದರು, ದಿವ್ಯಾಂಗರು, ಮಹಿಳೆಯರು ಹಾಗೂ ಸಾಮಾನ್ಯ ನಾಗರಿಕರಿಗೆ ದೊಡ್ಡ ಅನುಕೂಲ ವನ್ನು ಕಲ್ಪಿಸಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು.

ಅವರು ಸೋಮವಾರ ಬೀದರ ಜಿಲ್ಲಾ ನ್ಯಾಯಾಲಯದಲ್ಲಿ ನೂತನವಾಗಿ ಅಳವಡಿಸಲಾದ ಲಿಫ್ಟ್ ಸೌಲಭ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಬೀದರ್ ಜಿಲ್ಲಾ ವಕೀಲರ ಸಂಘವು ವ್ಯಕ್ತಪಡಿಸಿದ್ದ ಬೇಡಿಕೆಗೆ ಸ್ಪಂದಿಸಿ, ಲಿಫ್ಟ್ ಸೌಲಭ್ಯ ಮಾಡಿಸಿ ಕೊಡುತ್ತೇನೆ ಎಂಬ ಭರವಸೆಯನ್ನು ನೀಡಿದ್ದ ಸಂಸದ ಸಾಗರ ಖಂಡ್ರೆ ಅವರ ಮಾತು ಇಂದು ಸಾಕಾರಗೊಂಡಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಹಂಚಾಟೆ ಸಂಜೀವಕುಮಾರ, ಪ್ರಧಾನ ಜಿಲ್ಲಾ ಮತ್ತು



ಸತ್ರ ನ್ಯಾಯಾಧೀಶ ಸೈಯದ್ ಬಲಿಗುರ್ ರೆಹಮಾನ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಷನ್ಮುಖಯ್ಯ ಬಿ.ಸ್ವಾಮಿ, ಪ್ರಧಾನ ಕಾರ್ಯದರ್ಶಿ, ಧನರಾಜ ಎಸ್.ಬಿರಾದರ, ಕಾರ್ಯನಿರ್ವಾಹಕ ಅಭಿಯಂತರರ ಶಿವಶಂಕರ್ ಕಾಮಶೆಟ್ಟಿ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಶಿವಕುಮಾರ ವಿ.ಮಾಲಿ ಪಾಟೀಲ್, ಜಂಟಿ ಕಾರ್ಯದರ್ಶಿ ಭಜರಂಗ ಪಿ.ಖಾಶೆಂಪೂರ, ಖಜಾಂಚಿ ಜಯಶ್ರೀ ಡಿ.ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರು ಉತ್ಸವದ ಸಿದ್ಧತಾ ಕಾರ್ಯ ಚುರುಕಾಗಲಿ: ನಿತೀಶ್

ಬಗ್ಗೆ ತಿಳಿಸುವ ಕಾರ್ಯ ಮಾಡಬೇಕು. ಆಯಾ ಗ್ರಾಮಗಳಲ್ಲಿನ ಶಾಲೆಗಳ ಮುಖ್ಯ ಗುರುಗಳೊಂದಿಗೆ ಚರ್ಚಿಸಿ ಗ್ರಾಮ ಪಂಚಾಯಿತಿ ಮತ್ತು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಹಯೋಗದಲ್ಲಿ ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮಗಳಲ್ಲಿ ಜಾಥಾ ನಡೆಸಿ ಫೆ.5 ಹಾಗೂ ಫೆ.6 ಮತ್ತು ಫೆ.7ರಂದು ರಾಯಚೂರು ಉತ್ಸವ ನಡೆಯಲಿದೆ. ಎಲ್ಲರೂ ಭಾಗಿಯಾಗಬೇಕು ಎನ್ನುವ ಸಂದೇಶ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಂಟಿ ಸಭೆ ನಡೆಸಲು ಸೂಚನೆ: ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಗ್ರಾಮಗಳಲ್ಲಿ ಪ್ರತಿ ಮನೆಮನೆ ತೆರಳಿ ರಾಯಚೂರು ಉತ್ಸವದ ಬಗ್ಗೆ ಜನತೆಗೆ ತಿಳಿಸುವ ಕಾರ್ಯ ಮಾಡಬೇಕು. ಈ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಸೇರಿ ತಮ್ಮ ಹಂತದಲ್ಲಿ ಜಂಟಿ ಸಭೆ ಅಥವಾ ವಿಡಿಯೋ ಕಾನ್ಫರೆನ್ಸ್ ನಡೆಸಿ ಉತ್ಸವದ ಪ್ರಚಾರ ಕಾರ್ಯದ ಜವಾಬ್ದಾರಿಯನ್ನು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ವಹಿಸಿ ಮೇಲ್ವಿಚಾರಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಆಟೋ ಪ್ರಚಾರ ತುರ್ತು ಆರಂಭವಾಗಲಿ: ಜಿಲ್ಲೆಯಲ್ಲಿನ ಎಲ್ಲಾ ನಗರ, ಪಟ್ಟಣ ಪ್ರದೇಶ ಮತ್ತು ಹೋಬಳಿಗಳಲ್ಲಿ ಆಟೋ ಮೂಲಕ ಪ್ರಚಾರ ಕಾರ್ಯವು ಕೂಡಲೇ ಆರಂಭವಾಗಲಿ ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ: ಉತ್ಸವಕ್ಕೆ ಕೆಲವೇ ದಿನಗಳು ಬಾಕಿ ಇದೆ. ಹೀಗಾಗಿ ಪ್ರಚಾರ ಕಾರ್ಯ ಚುರುಕುಗೊಳಿಸಬೇಕು. ನಗರದಲ್ಲಿ ಸಂಚರಿಸುವ ಹಾಗೂ ಬೇರೆಡೆ ಸಂಚರಿಸುವ ಎಲ್ಲ ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ ಪ್ರಚಾರ ಕಾರ್ಯ ನಡೆಸಬೇಕು ಎಂದು ಸೂಚನೆ ನೀಡಿದರು.

ವಿವಿಧೆಡೆ ಪ್ರಚಾರ ನಡೆಸಿ: ಪ್ರತಿ ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಸಂದೇಶ ಹೋಗುವ ನಿಟ್ಟಿನಲ್ಲಿ ನಗರದ ರೈಲ್ವೆ ನಿಲ್ದಾಣ ಸೇರಿದಂತೆ ವಿವಿಧೆಡೆ ಬ್ಯಾನರ್ ಅಂಟಿಸಿ ಪ್ರಚಾರ ನಡೆಸಬೇಕು. ಫೆ.5 ರಿಂದ ಫೆ.7ರವರೆಗೆ ಯಾವ ಕಾರ್ಯಕ್ರಮಗಳು ಯಾವ ಸಮಯಕ್ಕೆ ನಡೆಯುತ್ತವೆ ಎಲ್ಲಿ ನಡೆಯುತ್ತವೆ ಎಂಬುದರ ಬಗ್ಗೆ ಪಟ್ಟಿ ಮಾಡಿ ಬ್ಯಾನರ್ ಅಳವಡಿಸಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಡಿಡಿಪಿಐ, ಡಿಡಿಪಿಯುಗೆ ಸೂಚನೆ: ಮುಖ್ಯವಾಗಿ ಎಲ್ಲ ಶಾಲೆಗಳ ಮತ್ತು ಕಾಲೇಜುಗಳ ವಿದ್ಯಾರ್ಥಿಗಳಿಗೆ ಉತ್ಸವದ ಬಗ್ಗೆ ವ್ಯಾಪಕವಾಗಿ ಪ್ರಚಾರ ಹೋಗುವ ದಿಶೆಯಲ್ಲಿ ಡಿಡಿಪಿಐ ಮತ್ತು ಡಿಡಿಪಿಐ ಇಲಾಖೆಗಳ ಅಧಿಕಾರಿಗಳು ಚುರುಕಾಗಿ ಕಾರ್ಯನಿರ್ವಹಿಸಬೇಕು. ಈ ಬಗ್ಗೆ ಎಲ್ಲ ಶಾಲಾ ಕಾಲೇಜುಗಳಿಗೆ ಸುತ್ತೋಲೆ ಮೂಲಕ ಮಾಹಿತಿ ಕಳುಹಿಸಲು ಕೂಡಲೇ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ವೆಬ್‌ಸೈಟ್ ವೀಕ್ಷಣೆ: ರಾಯಚೂರು ಉತ್ಸವ ನಿಮಿತ್ತ ಸಿದ್ಧಪಡಿಸಿದ ವೆಬ್‌ಸೈಟ್, ಇನ್‌ಸ್ಟಾಗ್ರಾಂ, ಫೇಸ್‌ಬುಕ್, ಎನ್‌ಐಸಿ ಪೇಜ್ ಸೇರಿದಂತೆ ನಾನಾ ವೆಬ್‌ತಾಣಗಳನ್ನು ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಿದರು. ಎಲ್ಲ ವೆಬ್‌ತಾಣಗಳು ಪ್ರತಿ ದಿನ ಅಪಡೇಟ್ ಆಗಬೇಕು. ಉತ್ಸವದ ಕಾರ್ಯಕ್ರಮಗಳ ಕುರಿತಂತೆ ಜನತೆಗೆ ಸ್ಪಷ್ಟ ಹಾಗು ನಿಖರವಾದ ಮಾಹಿತಿ ಒದಗಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಈರಣ್ಣ ಬಿರಾದಾರ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ಇದ್ದರು.

ಬಸವೇಶ್ವರ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ. ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮನೋಭಾವ ಮೂಡಿಸಲು ಸಹಕಾರಿ - ಗಂಗಾಧರ ನಾಯಕ

ವಿಜ್ಞಾನ ವಸ್ತು ಪ್ರದರ್ಶನದಲ್ಲಿ ತಂತ್ರಜ್ಞಾನ, ವಿಜ್ಞಾನದ ಮೇಲೆಅವಿಷ್ಕಾರಗಳು, ಪ್ರಾಕೃತಿಕ ಸಂಪತ್ತು ರಕ್ಷಣೆ, ಐತಿಹಾಸಿಕ ಸ್ಥಳಗಳು, ಬಣ್ಣಗಳ ವರ್ಗೀಕರಣ, ಪ್ರಾಣಿ-ಪಕ್ಷಿ ಸಂರಕ್ಷಣೆಗೆ ಹಸಿರು ಕ್ರಾಂತಿ ಯೋಜನೆ, ಆಹಾರ ಪದ್ಧತಿ, ಜೀವನ ಪದ್ಧತಿ, ಯಂತ್ರ-ತಂತ್ರಗಳ ಬಳಕೆ ಸೇರಿದಂತೆ ನೂರಾರು ಮಾದರಿಗಳನ್ನು ವಿದ್ಯಾರ್ಥಿಗಳು ತಯಾರಿಸಿದ್ದಾರೆ ಎಂದರು.

ವಿಜ್ಞಾನ ವಸ್ತು ಪ್ರದರ್ಶನವು ವಿದ್ಯಾರ್ಥಿಗಳ ಕ್ರಿಯಾಶೀಲತೆ, ವೈಜ್ಞಾನಿಕ ಮನೋಭಾವ ಮತ್ತು ಸಂಶೋಧನಾ ಕೌಶಲಗಳನ್ನು ಉತ್ತೇಜಿಸುವ ಪ್ರಮುಖ ಚಟುವಟಿಕೆಯಾಗಿದೆ. ಪರಿಸರ ಸ್ನೇಹಿ ತಂತ್ರಜ್ಞಾನ ಮತ್ತು ದೈನಂದಿನ ಜೀವನದ ಸಮಸ್ಯೆಗಳಿಗೆ ವೈಜ್ಞಾನಿಕ ಪರಿಹಾರದ ಮಾಡಲ್ ಗಳನ್ನು ಪ್ರದರ್ಶಿಸಲು ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿದೆ ಎಂದರು. ನಿವೃತ್ತ ಸರ್ಕಾರಿ ಶಿಕ್ಷಕರು, ಉತ್ತಮ ಶಿಕ್ಷಕರನ್ನು ನ್ನಾನಿಸಿ ಗೌರವಿಸಲಾಯಿತು. ನಿವೃತ್ತ ಟಿಎಚ್‌ಒ ಡಾ.ಶರಣಪ್ಪ ಬಲ್ಲಟಗಿ, ಗುರು ಬಸಯ್ಯ ಹಿರೇಮಠ, ವಿದ್ಯಾವಾಹಿನಿ ಶಾಲೆ ಅಧ್ಯಕ್ಷ ಟಿ. ಬಸವರಾಜ, ಶಿವಪ್ಪಗೌಡ, ಆರ್.ಶರಣಪ್ಪ, ವಿಜಯ ಲಕ್ಷ್ಮೀ, ಪಿ. ಬಸವರಾಜ, ಡಾ.ಚಂದ್ರ ಶೇಖರ, ನಿವೃತ್ತ ಶಿಕ್ಷಕ ಮೂಕಪ್ಪ ಕಟ್ಟಿಮನಿ, ಮಹಾದೇವಪ್ಪ, ಶ್ರೀಶೈಲ, ತಿರುಮಲರಾವ್, ಶಿವಗಂಗಮ್ಮ, ಶಾಲೆಯ ಆಡಳಿತಾಧಿಕಾರಿ ಸಂತೃಪ್ತ, ಮುಖ್ಯಶಿಕ್ಷಕಿ ಸವಿತಾ ಇನ್ನಿತರರಿದ್ದರು.

ರಾಯಚೂರು ಉತ್ಸವದ ಸೈಕ್ಲಾಥಾನ್: ಉತ್ಸಾಹದಿಂದ 20 ಕಿ.ಮೀ ಸೈಕಲ್ ತುಳಿದ ಸ್ಪರ್ಧಾಳುಗಳು

ಅವರು ಭಾಗಿಯಾಗಿ ಗಮನ ಸೆಳೆದರು. ಪ್ರಥಮ ಸ್ಥಾನಕ್ಕೆ 10 ಸಾವಿರ ರೂ., ದ್ವಿತೀಯ ಸ್ಥಾನಕ್ಕೆ 5 ಸಾವಿರ ಹಾಗೂ ತೃತೀಯ ಸ್ಥಾನಕ್ಕೆ 3 ಸಾವಿರ ರೂ.ಗಳನ್ನು ನೀಡಿ ಗೌರವಿಸಲಾಯಿತು.

ಶಾಲಾ ವಿದ್ಯಾರ್ಥಿಗಳು ಭಾಗಿ: ಈ ಸೈಕಲ್ ಮ್ಯಾರಾಥಾನ್‌ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವೈದ್ಯರು ಭಾಗಿಯಾಗಿದ್ದು ವಿಶೇಷವಾಗಿತ್ತು. ವಿದ್ಯಾರ್ಥಿಗಳಾದ ಹಸನ್, ಶ್ರೇಯಸ್, ಗಣೇಶ್ ಮಿಶ್ರಬ್, ಮಹಮ್ಮದ್ ಆಸಂಖಾನ್, ದೇವ ರಾಜ್, ಮನೀಶ್, ಶ್ರೇಯಾಂಕ ಅವರು ಸಹ ಭಾಗಿಯಾಗಿ ಸೈಕಲ್ ಓಡಿಸಿ ಸಂಭ್ರಮಿಸಿದರು.

ಇದೇ ಸಂದರ್ಭದಲ್ಲಿ ಗ್ಯಾರಂಟಿ ಯೋಜ ನೆಗಳ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ರಾಯಚೂರು ಸಹಾಯಕ ಆಯುಕ್ತ ರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಯುವಸಬ ಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ್ ನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಎನ್.ವಿ.ಡಿ ಸ್ಪರ್ಧಾ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಲಿವಿಂಗ್ ಆಫ್ ಆರ್ಟ ಸಂಸ್ಥೆಯ ಮಲ್ಲಿಕಾರ್ಜುನ ಸ್ವಾಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರು, ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷರಾದ ಡಾ.ಬಸವರಾಜ, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜೂಜು ಚಟುವಟಿಕೆಗಳಲ್ಲಿ ಎಲ್ಲ ಪಕ್ಷದ ಪ್ರಭಾವಿಗಳು ಶಾಮೀಲು

ಮಟ್ಕಾ, ಜೂಜು ಚಟುವಟಿಕೆ ಗಳಿಗೆ ಕಡಿವಾಣ ಹಾಕಿ. ರಾಯಚೂರು ಜಿಲ್ಲೆಯಾದ್ಯಂತ ಇಂತಹ ಪ್ರಕರಣಗಳು ಹೆಚ್ಚಾಗಿವೆ. ಕಳ್ಳತನ ಪ್ರಕರಣಗಳು ಕೂಡ ಜಾಸ್ತಿ ಆಗಿವೆ. ನಾನು ಶಾಸಕಿ ಆದ ಮೇಲೆ ನನ್ನ ಕ್ಷೇತ್ರ ದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಮುಂದಾಗಿದ್ದೆ. ಆದರೆ ಸದ್ಯ ಆಗ್ತಾ ಇಲ್ಲ. ಗೃಹ ಸಚಿವರು ಇದರ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳ ಬೇಕು. ಹೆಣ್ಣು ಮಕ್ಕಳು ರಾತ್ರಿ ಹೊತ್ತು ಓಡಾಡುವ ಹಾಗಿಲ್ಲ. ನಾನು ಓಡಾಡುವಾಗ ನನ್ನ ಹಿಂದೆ ಹತ್ತಾರು ವಾಹನಗಳು ಬೆನ್ನಟ್ಟಿ ಬರುತ್ತವೆ. ಪ್ರಶ್ನೆ ಮಾಡಿದ್ರೆ, ನಿಮ್ಮ ಮನೆ ತನಕ ಬಿಟ್ಟು ಬರುತ್ತೇವೆ ಅಂತಾರೆ. ಒಂದು ರೀತಿ ಬೆದರಿಕೆ ಹಾಕುವ ರೀತಿ ಮಾತಾಡ್ತಾರೆ ಎಂದು ಅಳಲು ತೋಡಿಕೊಂಡರು.

ಇದರ ಹಿಂದೆ ದೊಡ್ಡ ದೊಡ್ಡವರ ಕೈ ಇದೆ. ತಮಗೇ ರಕ್ಷಣೆ ಇಲ್ಲ ಎಂದು ಶಾಸಕಿ ಕರೆಮ್ಮ ನಾಯಕ್ ಅಸಹಾಯಕತೆ ವ್ಯಕ್ತಪಡಿಸಿದರು. ಇದಕ್ಕುತ್ತರಿಸಿದ ಪರಮೇಶ್ವರ್ ಶಾಸಕರು ಯಾರೇ ಇದ್ದರೂ ಕ್ಷೇತ್ರದಲ್ಲಿ ಇದ್ದರೆ ಪೊಲೀಸರು ರಕ್ಷಣೆ ಕೊಡಬೇಕು, ಅದು ಪೊಲೀಸರ ಕರ್ತವ್ಯ. ಲೋಪ ಆದರೆ ಪೊಲೀಸರ ವಿರುದ್ಧ ಕ್ರಮ ಆಗಲಿದೆ. ಶಾಸಕರಿಗೆ ತೊಂದರೆ ಆಗಲು ನಾವು ಬಿಡುವುದಿಲ್ಲ. ನಿಮ್ಮ ರಕ್ಷಣೆಗೆ ಸರ್ಕಾರ ಇದೆ ಅಂತ ಭರವಸೆ ಕೊಟ್ಟರು.

ಬಿಎಂಸಿಆರ್‌ಸಿ ಬಳಿಯ ಮಹಾತ್ಮಗಾಂಧೀಜಿ ಪ್ರತಿಮೆಗೆ ಸಚಿವ ರಹೀಂ ಖಾನ್ ಅವರಿಂದ ಗೌರವ ನಮನ



ಬಳ್ಳಾರಿ,ಜ.27-

77ನೇ ಗಣರಾಜ್ಯೋತ್ಸವದ ದಿನದ ಅಂಗವಾಗಿ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಮುಂಭಾಗದ ಆವರಣದಲ್ಲಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಪ್ರತಿಮೆಗೆ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಸದ ಈ.ತುಕಾರಾಮ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಪಾಲಿಕೆ ಉಪ ಮೇಯರ್ ಮುಬೀನಾ, ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕ ಡಾ.ಪಿ.ಎಸ್ ಹರ್ಷ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಸಿಬ್ಬಂದಿ ವರ್ಗ, ವೈದ್ಯ ಕೀಯ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಇದ್ದರು.



77 ಗಣರಾಜ್ಯೋತ್ಸವ ಹಾಜಿಚೌದ್ರಿಯವರಿಂದ ದ್ವಜಾರೋಹಣ

ಸಿರವಾರ. ಜ.27-

ಪಟ್ಟಣ ಪಂಚಾಯತಿಯಲ್ಲಿ 77 ನೇ ಗಣರಾಜ್ಯೋತ್ಸ ವದ ಅಂಗವಾಗಿ ಅಧ್ಯಕ್ಷರಾದ ಹಾಜಿಚೌದ್ರಿ ಅವರು ಡಾ.ಬಿ.ಆರ್ ಅಂಬೇಡ್ಕರ್, ರಾಷ್ಟ್ರಪಿತ ಮಹಾತ್ಮ ಗಾಂಧಿಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಿ, ನಂತರ ರಾಷ್ಟ್ರ ಧ್ವಜಾರೋಹಣ ನೇರವೆರಿಸಿದರು. ಉಪಾದ್ಯಕ್ಷೆ ಲಕ್ಷ್ಮಿ ಆದೆಪ್ಪ, ಮುಖ್ಯಾಧಿಕಾರಿ ಸುರೇಶ ಶೇಟ್ಟಿ, ಸರ್ವ ಸದಸ್ಯರು, ಮುಖಂಡರು ಭಾಗವಹಿಸಿದರು.



ಜೆಡಿಎಸ್ ಕಛೇರಿಯಲ್ಲಿ 77 ನೇ ಗಣರಾಜ್ಯೋತ್ಸವ

ಸಿರವಾರ.ಜ.27-

ಭಾರತದ ಸಂವಿಧಾನವು ವಿಶ್ವ ಇತಿಹಾಸದಲ್ಲಿಯೇ ಅತಿದೊಡ್ಡ ಗಣರಾಜ್ಯದ ಅಡಿಪಾಯದ ದಾಖಲೆಯಾಗಿದೆ. ನಮ್ಮ ಸಂವಿಧಾನದಲ್ಲಿ ಪ್ರತಿಪಾದಿಸಲಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಆದರ್ಶಗಳು ನಮ್ಮ ಗಣರಾಜ್ಯವನ್ನು ವ್ಯಾಖ್ಯಾನಿಸುತ್ತವೆ. ಸಂವಿಧಾನದ ನಿರ್ಮಾತೃಗಳು ಸಾಂವಿಧಾನಿಕ ನಿಬಂಧನೆಗಳ ಮೂಲಕ ರಾಷ್ಟ್ರೀಯತೆಯ ಮನೋಭಾವ ಮತ್ತು ದೇಶದ ಏಕತೆಗೆ ಬಲವಾದ ಅಡಿಪಾಯವನ್ನು ಒದಗಿಸಿದ್ದಾರೆ ಎಂದು ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಹೇಳಿದರು. ಸಿರವಾರ ಪಟ್ಟಣದಲ್ಲಿರುವ ಜೆಡಿಎಸ್ ಪಕ್ಷದ ಕಛೇರಿಯಲ್ಲಿ 77 ನೆ ಗಣರಾಜ್ಯೋತ್ಸ ವ ಅಂಗವಾಗಿ ಸಂವಿಧಾನದ ಶಿಲ್ಪಿ ಡಾ ಬಿಆರ್ ಅಂಬೇಡ್ಕರ್ ಮತ್ತು ರಾಷ್ಟ್ರಪಿತ ಮಹಾತ್ಮ ಗಾಂಧಿಜಿಯವರ ಭಾವಚಿತ್ರಕ್ಕೆ ರಾಜಾ ವೆಂಕಟಪ್ಪ ನಾಯಕ ದೊರೆ ಅವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ್ ಪಾಟೀಲ್ ಬಲ್ಲಟಗಿ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಿ ದ್ವಜಾರೋಹಣ ಮಾಡುವ ಮೂಲಕ ಸರಳವಾಗಿ ಆಚರಣೆ ಮಾಡಲಾಯಿತು. ನಂತರ ಶಾಲಾ ಮಕ್ಕಳಿಗೆ ನೋಟ್ ಬುಕ್ ವಿಚಾರಿಸಲಾಯಿತು. ಇದೇ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಜಿ.ಲೋಕ ರೆಡ್ಡಿ, ಸಿರವಾರ, ಕಾಶಿನಾಥ್ ಸರೋಧೆ, ವಿಜಯಲಕ್ಷ್ಮಿ ಆದೆಪ್ಪ ಸಾಹುಕಾರ್, ಮಹಾ ಪ್ರದಾನ ಕಾರ್ಯದರ್ಶಿ ದಾನಪ್ಪ ಸಿರವಾರ, ರವಿಪಾಟೀಲ್ ಅತ್ತನೂರು, ರಾಮಾಚಾರಿ ಜಾಲಾಪುರ ಕ್ಯಾಂಪ್, ಪ್ರಧಾನ ಕಾರ್ತದರ್ಶಿ ರಂಜಿತ್ ಕುಮಾರ್, ಚಂದ್ರಶೇಖರ್, ಪರಮೇಶ್ ನಾಯ್ಕ್, ಖಾಜಾ ಪಾಷಾ ಕವಿತಾಳ, ಲಕ್ಷ್ಮಣ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ದೇವದುರ್ಗ ಬಣಜಿಗ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಆಯ್ಕೆ





ದೇವದುರ್ಗ,ಜ.27-

ದಿನಾಂಕ 25 ಜನವರಿ 2026 ರಂದು ಪಟ್ಟಣದ ಖೇಣೇದ್ ಫಂಕ್ಷನ್ ಹಾಲಲ್ಲಿ ನಡೆದ ದೇವದುರ್ಗ ತಾಲೂಕು ಬಣಜಿಗ ಸಮಾಜ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಪುನಾರಚನೆ ಮಾಡಿ ಆಯ್ಕೆ ಮಾಡಲಾಯಿತು,,

ಗೌರವಾಧ್ಯಕ್ಷರಾಗಿ ಪ್ರಕಾಶ ಖೇಣೇದ್, ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಪಾಟೀಲ್ ಅಮರಾಪುರ, ಉಪಾಧ್ಯಕ್ಷರಾಗಿ ಶರಣಗೌಡ ಮಾ. ಪಾ. ಬಿ. ಗಣೇಕಲ್, ವಿರೂಪಾಕ್ಷಪ್ಪ ಸಾಹುಕಾರ ಬಳೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಚಂದ್ರಶೇಖರ ವಿಭೂತಿ ವಕೀಲರು ಇವರನ್ನು ದೇವದುರ್ಗ ತಾಲೂಕು ಸರ್ವ ಬಣಜಿಗ ಸಮಾಜದ ಸದಸ್ಯರು ಸೇರಿ ಆಯ್ಕೆ ಮಾಡಲಾಯಿತು,

ಸಮಾಜದ ಸಂಘಟನೆ ಹಾಗೂ ದ್ವನಿಯಾಗಿ ಕೆಲಸ ಮಾಡಲು ನೂತನ ಅಧ್ಯಕ್ಷರಿಗೆ ಶುಭ ಕೋರಿ ತಿಳಿಸಲಾಯಿತು,,

ವಿಶೇಷ ಅತಿಥಿಯಾಗಿ ಸಿದ್ರಾಮುಪ್ಪ ಕಾಡ್ಲೂರು ರಾಜ್ಯ ಬಣಜಿಗ ಸಮಾಜದ ಕಾರ್ಯಕಾರಿ ಸಮಿತಿ ಸದಸ್ಯರು ಭಾಗವಹಿಸಿದ್ದರು,

ಸಭೆಯಲ್ಲಿ ಬಸವರಾಜಪ್ಪ ವಾರದ, ಬಸವರಾಜಪ್ಪ ಅಮರಾಪುರ,, ಶಿವರಾಜಪ್ಪ ಚಿಕ್ಕಬುದೂರು,, ಶರಣಪ್ಪ ಪಡಶೆಟ್ಟಿ, ಶಶಿಕಾಂತ ಜಾಲಹಳ್ಳಿ ಶರಣು ರಾಮದುರ್ಗ, ಶರಣು ಕೋರಿ, ರಾಜಪ್ಪ ಕೋರಿ, ಬಸವರಾಜ್ ಯಾಟಗಲ್, ಶಿವಕುಮಾರ್ ಹರವಿ , ಬಣಜಿಗ ಸಮಾಜದ ಗಣ್ಯರು ಹಿರಿಯರು ಯುವಕರು ಉಪಸ್ಥಿತರಿದ್ದರು.



ಎಡದೋರೆ ನಾಡೋತ್ಸ ವ ಪ್ರಚಾರಕ್ಕೆ ತಹಶಿಲ್ದಾರರಿಂದ ಚಾಲನೆ

ಸಿರವಾರ.ಜ.27-

2 ದಶಕಗಳ ನಂತರ ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸ ವವನ್ನು ಮೂರು ದಿನಗಳ ಕಾಲ ಹಮ್ಮಿಕೊಳಲಾಗಿದೆ. ಜಿಲ್ಲೆಯ ಸಾಂಸ್ಕೃತಿಕ ಹಿರಿಮೆಯನ್ನು ಸಾರುವ ಎಡೆದೊರೆ ನಾಡು ರಾಯಚೂರು ಉತ್ಸ ವವನ್ನು ಅತ್ಯಂತ ಸಂಭ್ರಮದಿಂದ ಮತ್ತು ಯಶಸ್ವಿಯಾಗಿ ಆಚರಿಸಲಾಗುವುದು ಎಲ್ಲಾರೂ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ತಹಸೀಲ್ದಾರ್ ಅಶೋಕಪವಾರ ಕರೆ ನೀಡಿದರು. ಪಟ್ಟಣದ ಪಿಡಬ್ಲ್ಯೂಡಿ ಕ್ಯಾಂಪಿನ ಪ್ರೌಢಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ 77 ನೇ ಗಣರಾಜ್ಯೋತ್ಸ ವ ವೇದಿಕೆ ಕಾರ್ಯಕ್ರಮದಲ್ಲಿ ಎಡದೋರೆ ನಾಡು ಉತ್ಸ ವ ಪ್ರಚಾರ ಪತ್ರಗಳನ್ನು ಉದ್ಘಾಟಿಸಿ ಮಾತನಾಡಿದ ಅವರು ಪೆಬ್ರವರಿ 5,6,7 ಮೂರು ದಿನಗಳ ಉತ್ಸ ವ ಇರುತ್ತದೆ. ಎಲ್ಲಾ ವಯೋಮಾನದವರಿಗೆ ಈ ಕಾರ್ಯಕ್ರಮ ಮನೊರಂಜನೆ ನೀಡುತ್ತದೆ. ಆದರಿಂದ ವಿದ್ಯಾರ್ಥಿಗಳು ತಮ್ಮ ಪಾಲಕರಿಗೆ ಕಾರ್ಯಕ್ರಮದ ಕುರಿತು ಮನವರಿಕೆ ಮಾಡಿಸಿ ಬಾಗವಹಿಸಲು ಹೇಳಬೇಕು ಎಂದರು. ಪ. ಪಂಚಾಯತಿ ಅದ್ಯಕ್ಷರಾದ ಹಾಜಿಚೌದ್ರಿ, ಉಪಾದ್ಯಕ್ಷೆ ಲಕ್ಷ್ಮೀ ಆದೇಪ್ಪ, ಸ.ನೌ.ಸಂ. ಅದ್ಯಕ್ಷ ಆರೀಪ್ ಮಿಯಾ,ತಾ.ಪಂ ಇಓ ಶಶಿಧರ ಸ್ವಾಮಿ, ಮುಖ್ಯಾಧಿಕಾರಿ ಸುರೇಶ ಶೇಟ್ಟಿ, ಸಿಡಿಪಿಒ ಗೋಕುಲಸಾಬ್, ಖಜಾನೆ ಅದಿಕಾರಿ ಶಂಕ್ರಮ್ಮ, ನೀರಾವರಿ ಇಲಾಖೆಯ ಎಇಇ ವಿಜಯಲಕ್ಷ್ಮಿ, ಪ್ರಭಾರಿ ಪಿಎಸ್ ಐ ಅಜ್ಮೀರ ಪಾಷ,, ಸಿ ಆರ್ ಸಿ ಮಹೇಶ, ಶಿಕ್ಷಕರು, ಸಿಬ್ಬಂದಿ ವರ್ಗದವರು ಇದರು.

ಬಸವೇಶ್ವರ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ. ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಮನೋಭಾವ ಮೂಡಿಸಲು ಸಹಕಾರಿ - ಗಂಗಾಧರ ನಾಯಕ



ಸಿರವಾರ.ಜ.27-

ವಿದ್ಯಾರ್ಥಿಗಳಲ್ಲಿ ಅಡಗಿರುವ ಸೂಕ್ತ ಪ್ರತಿಭೆ' ಅನಾವರಣ ಹಾಗೂ ವೈಜ್ಞಾನಿಕ ಮನೋಭಾವ ಅರಳಿಸಲು ವಿಜ್ಞಾನ ವಸ್ತು ಪ್ರದರ್ಶನ ಉತ್ತಮ ವೇದಿಕೆಯಾಗಿದೆ ಎಂದು ಮಾಜಿ ಶಾಸಕ ಗಂಗಾಧರ ನಾಯಕ ಹೇಳಿದರು.

ತಾಲೂಕಿನ ಬಲ್ಲಟಗಿ ಗ್ರಾಮದ ಬಸವೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ಪೌರಾಣಿಕ, ಕಲೆ ಸಂಸ್ಕೃತಿ, ಭಾಷೆ,ವಿಜ್ಞಾನ ತಂತ್ರಜ್ಞಾನವನ್ನು ಉತ್ತಮ ಮಾದರಿಗಳನ್ನು ಪ್ರದರ್ಶಿಸಿದ್ದಾರೆ. ವೈಜ್ಞಾನಿಕ ಮನೋಭಾವ ಅನಾವರಣಕ್ಕೆ ಇಂಥ ಕಾರ್ಯಕ್ರಮಗಳಿಗೆ ಮಹತ್ವ ನೀಡುವುದು ಅವಶ್ಯಕ. ಪ್ರಸ್ತುತ ತಂತ್ರಜ್ಞಾನ, ಪರಿಸರ ಕಾಳಜಿ ಬಗ್ಗೆ ಅರಿವು, ಕ್ರಿಯಾತ್ಮಕ ಮನೋಶಕ್ತಿಗೆ ಉತ್ತೇಜನ ನೀಡುತ್ತಿರುವುದು ವೈಜ್ಞಾನಿಕ ವಿಷಯಗಳನ್ನು ಅಭಿವ್ಯಕ್ತಗೊಳಿಸಲು ಸಹಕಾರಿಯಾಗುತ್ತದೆ ಎಂದರು.

ಶಾಲೆಯ ಅಧ್ಯಕ್ಷ ಚಂದ್ರಶೇಖರ ಬಲ್ಲಟಗಿ ಮಾತನಾಡಿ, ಪ್ರತಿಭೆ ಹೊರತರಲು ಈ ವೇದಿಕೆ ನಿರ್ಮಿಸಿದ್ದು, ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಂಡಿದ್ದಾರೆ. ವಿಜ್ಞಾನ ಮತ್ತು ಸಮಾಜ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ತಂತ್ರಜ್ಞಾನ, ವಿಜ್ಞಾನದ ಮೇಲೆಅವಿಷ್ಕಾರಗಳು, ಪ್ರಾಕೃತಿಕ ಸಂಪತ್ತು ರಕ್ಷಣೆ, ಐತಿಹಾಸಿಕ ಸ್ಥಳಗಳು, ಬಣ್ಣಗಳ ವರ್ಗೀಕರಣ, ಪ್ರಾಣಿ-ಪಕ್ಷಿ ಸಂರಕ್ಷಣೆಗೆ ಹಸಿರು ಕ್ರಾಂತಿ ಯೋಜನೆ, ಆಹಾರ ಪದ್ಧತಿ, ಜೀವನ ಪದ್ಧತಿ, ಯಂತ್ರ-ತಂತ್ರಗಳ ಬಳಕೆ ಸೇರಿದಂತೆ ನೂರಾರು ಮಾದರಿಗಳನ್ನು ವಿದ್ಯಾರ್ಥಿಗಳು ತಯಾರಿಸಿದ್ದಾರೆ ಎಂದರು.

ವಿಜ್ಞಾನ ವಸ್ತು ಪ್ರದರ್ಶನವು ವಿದ್ಯಾರ್ಥಿಗಳ ಕ್ರಿಯಾಶೀಲತೆ, ವೈಜ್ಞಾನಿಕ ಮನೋಭಾವ ಮತ್ತು ಸಂಶೋಧನಾ ಕೌಶಲಗಳನ್ನು ಉತ್ತೇಜಿಸುವ ಪ್ರಮುಖ ಚಟುವಟಿಕೆಯಾಗಿದೆ. ಪರಿಸರ ಸ್ನೇಹಿ ತಂತ್ರಜ್ಞಾನ ಮತ್ತು ದೈನಂದಿನ ಜೀವನದ ಸಮಸ್ಯೆಗಳಿಗೆ ವೈಜ್ಞಾನಿಕ ಪರಿಹಾರದ ಮಾಡಲ್ ಗಳನ್ನು ಪ್ರದರ್ಶಿಸಲು ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗಿದೆ ಎಂದರು. ನಿವೃತ್ತ ಸರ್ಕಾರಿ ಶಿಕ್ಷಕರು, ಉತ್ತಮ ಶಿಕ್ಷಕರನ್ನು ನ್ನಾನಿಸಿ ಗೌರವಿಸಲಾಯಿತು. ನಿವೃತ್ತ ಟಿಎಚ್‌ಒ ಡಾ.ಶರಣಪ್ಪ ಬಲ್ಲಟಗಿ, ಗುರು ಬಸಯ್ಯ ಹಿರೇಮಠ, ವಿದ್ಯಾವಾಹಿನಿ ಶಾಲೆ ಅಧ್ಯಕ್ಷ ಟಿ. ಬಸವರಾಜ, ಶಿವಪ್ಪಗೌಡ, ಆರ್.ಶರಣಪ್ಪ, ವಿಜಯಲಕ್ಷ್ಮೀ, ಪಿ. ಬಸವರಾಜ, ಡಾ.ಚಂದ್ರಶೇಖರ, ನಿವೃತ್ತ ಶಿಕ್ಷಕ ಮೂಕಪ್ಪ ಕಟ್ಟಿಮನಿ, ಮಹಾದೇವಪ್ಪ, ಶ್ರೀಶೈಲ, ತಿರುಮಲರಾವ್, ಶಿವಗಂಗಮ್ಮ, ಶಾಲೆಯ ಆಡಳಿತಾಧಿಕಾರಿ ಸಂತೃಪ್ತ, ಮುಖ್ಯಶಿಕ್ಷಕಿ ಸವಿತಾ ಇನ್ನಿತರರುವಿದತ

ತಾಲೂಕ ಆಡಳಿತದಿಂದ 77 ನೇ ಗಣರಾಜ್ಯೋತ್ಸವ ಪ್ರತಿಯೊಬ್ಬರು ಸಂವಿಧಾನವನ್ನು ಗೌರವಿಸಬೇಕು- ಅಶೋಕ ಪವಾರ



ಸಿರವಾರ,ಜ.27- ಜನವರಿ 26 ರಂದು ಭಾರತ ಸಂವಿಧಾನ ಅಂಗೀಕರಿಸಿದ ದಿನ ಈ ದಿನವನ್ನು ಗಣ್ಯರ ಸವಿ ನೆನೆಪಿಗಾಗಿ ಪ್ರತಿ ವರ್ಷ ಗಣರಾಜ್ಯೋತ್ಸ ವ ದಿನವನ್ನಾಗಿ ಸಂವಿಧಾನ ಅಂಗೀಕರಿಸಿದ್ದು.ಇಂದಿಗೂ 77ನೇ ವರ್ಷದ ಸಂಭ್ರಮದಲ್ಲಿ ಇದ್ದೇವೆ ಗಣರಾಜ್ಯೋತ್ಸ ವವು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿ ಹಿಡಿದ ದಿನವಾಗಿದೆ ಎಂದು ತಹಶಿಲ್ದಾರ ಅಶೋಕಪವಾರ ಹೇಳಿದರು.

ಪಟ್ಟಣದ ಬಾಲಕಿಯರ ಪ್ರೌಢಶಾಲಾ ಆವರಣದಲ್ಲಿ ಆಯೋಜಿಸಿದ ತಾಲೂಕಾಡಳಿತ ಮತ್ತು ಪಟ್ಟಣ ಪಂಚಾಯತಿ ಸಂಯುಕ್ತಾಶ್ರಯದಲ್ಲಿ, 77ನೇ ಗಣರಾಜ್ಯೋತ್ಸ ವದ ಅಂಗವಾಗಿ ಡಾ.ಬಿ.ಆರ್ ಅಂಬೇಡ್ಕರ್ - ಮಹಾತ್ಮ ಗಾಂಧಿಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದ್ವಜಾರೋಹಣ ಮಾಡಿ, ವಿವಿಧ ಶಾಲೆ ವಿದ್ಯಾರ್ಥಿಗಳಿಂದ ಪಥ ಸಂಚಲನ ನೆರವೆರಿತು.

ನಂತರ ಮಾತನಾಡಿದ ಅವರು ಭಾರತದ ಸಂವಿಧಾನವನ್ನು ಪ್ರತಿಯೊಬ್ಬರು ಗೌರವಿಸಬೇಕು, ಸಂವಿಧಾನದ ಚೌಕಟ್ಟಿನಲ್ಲಿ ನಾವೆಲ್ಲರೂ ಕಾರ್ಯ ನಿರ್ವಹಿಸಲಾಗುತ್ತಿದ್ದು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಬೇಕೆಂದರು.1950 ಜನವರಿ 26 ರಂದು ಭಾರತದ ಸಂವಿಧಾನ ಅಂಗೀಕರಿಸಿದ ಸವಿ ನೆನೆಪಿಗಾಗಿ ಪ್ರತಿ ವರ್ಷ ಈ ದಿನ ಗಣರಾಜ್ಯೋತ್ಸ ವ ದಿನವನ್ನಾಗಿ ಸಂವಿಧಾನ ಅಂಗೀಕರಿಸಿದ್ದು ಆ ದಿನವನ್ನು ಗಣರಾಜ್ಯೋತ್ಸ ವ ದಿನಾಚರಣೆಯನ್ನಾಗಿ ಮಾಡಿ ಈ ದಿನ ಗಣ್ಯರ ಸವಿ ನೆನಪಿಗಾಗಿ ಗಣರಾಜ್ಯೋತ್ಸ ವ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದರು.ನಂತರ ಸರಕಾರಿ ನೌಕರರ ಸಂಘದ ಅಧ್ಯಕ್ಷ ಆರೀಫ್ ಮಿಯಾ ಸವಿಸ್ತಾರವಾಗಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಪಟ್ಟಣದ ವಿವಿಧ ಶಾಲೆಯ ವಿದ್ಯಾರ್ಥಿಗಳು ಪೇರೆಡ್ ಹಾಗೂ ನೃತ್ಯ ಪ್ರದರ್ಶನ ಸಾಂಸ್ಕೃತಿಕ ಕಾರ್ಯಕ್ರಮ ಆಯಾ ಶಾಲಾ ಶಿಕ್ಷಕರಿಂದ ಅಚ್ಚುಕಟ್ಟಾಗಿ ಮಾಡಲಾಯಿತು. ನಂತರ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾದಕರಿಗೆ ತಾಲೂಕಾಡಳಿತದಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ನೂತನ ಅಧ್ಯಕ್ಷ ಹಾಜೀ ಚೌದ್ರಿ, ಉಪಾಧ್ಯಕ್ಷೆ ಲಕ್ಷ್ಮೀ ಆದೇಪ್ಪ ನಾಯಕ, ಪ.ಪಂ.ಮುಖ್ಯಾಧಿಕಾರಿ ಸುರೇಶ ಶೆಟ್ಟಿ, ನೀರಾವರಿ ಇಲಾಖೆ ಎಇಇ ವಿಜಯಲಕ್ಷ್ಮಿ ಪಾಟೀಲ್, ಸಿಡಿಪಿಓ ಗೋಕುಲಸಾಬ್,ತಾಪಂ ಅಧಿಕಾರಿ ಶಶಿಧರ್ ಸ್ವಾಮಿ, ಸೇರಿದಂತೆ ಕಂದಾಯ ಇಲಾಖೆ ಅಧಿಕಾರಿಗಳು,ಪಪಂ ಸರ್ವ ಸದಸ್ಯರು ಪಟ್ಟಣದ ಮುಖಂಡರು

ವಿವಿಧ ಇಲಾಖೆಯ ಅಧಿಕಾರಿಗಳು, ಶಿಕ್ಷಕರು, ಶಾಲಾ ಮಕ್ಕಳು ಇನ್ನು ಅನೇಕರು ಇದ್ದರು.

ಗೆಜ್ಜೆ ಭಾವಿ.77ನೇ ಗಣರಾಜ್ಯೋತ್ಸವ ಶಾಲಾ ಮಕ್ಕಳಿಗೆ ವಿವಿಧ ಸ್ಪರ್ಧೆ ಯುವ ಟೀಮ್ ಕಾರ್ಯಕ್ರಮ ಶ್ಲಾಘನೀಯ ರಡ್ಡೆಪ್ಪ ಬೋವಿ



ಅರಕೇರಾ ,ಜ.27-

ತಾಲೂಕಿನ ಗೆಜ್ಜೆ ಭಾವಿ ಗ್ರಾಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಯಲ್ಲಿ 77 ನೇ ಗಣರಾಜ್ಯೋತ್ಸ ವ ಕಾರ್ಯಕ್ರಮ ಜರುಗಿತು.

ಯುವ ಟೀಮುವತಿಯಿಂದ ಗಣರಾಜ್ಯೋತ್ಸ ವ ಅಂಗವಾಗಿ ಶಾಲಾಮಕ್ಕಳಿಗೆ ಆಟೋಟ ಸ್ಪರ್ಧೆಗಳು.ಚಿತ್ರಕಲಾಸ್ಪರ್ಧೆ.ಬಾಷಣಸ್ಪರ್ದೆ.ರಸಪ್ರಶ್ನೆಗಳನ್ನು ಏರ್ಪಡಿಸಿದ್ದರು.ವಿಜೇತರಾದ ಮಕ್ಕಳಿಗೆ ಬಹುಮಾನವನ್ನು ನೋಟಬುಕ್.ಪೇನ್ನು.ಬಾಗ್ಯವಿತರಿಸಲಾಯಿತು .

ಕಾರ್ಯಕ್ರಮದಲ್ಲಿ ರೆಡ್ಡೆಪ್ಪ ಭೊವಿಗ್ರಾಮಪಂಚಾಯತ್ ಸದಸ್ಯರು ಮಾತನಾಡಿ ಯುವ ಟೀಮುನವರು ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ಮಕ್ಕಳಿಗೆ ಸ್ಪೂರ್ತಿ ತುಂಬಿದ್ದಾರೆ.ಅಲ್ಲದೇ ಮಕ್ಕಳ ಶೈಕ್ಷಣಿಕವಾಗಿ ಮುಂದೆ ಬರಲು ಸಹಕಾರಿಯಾಗಿದೆ ಎಂದರು.ಕಾರ್ಯಕ್ರಮದ ಅಧ್ಯಕ್ಷರಾದ ಸಿದ್ದನಗೌಡ ಮುಖ್ಯಗುರು ವಹಿಸಿದ್ದರು.

ಸಂದರ್ಭದಲ್ಲಿ ಮುಸ್ಟೂರು ಗ್ರಾಮಪಂಚಾಯತ್ ಮಾಜಿ ಗ್ರಾಮಪಂಚಾಯತ್ ಅಧ್ಯಕ್ಷರಾದ ತೇಜರಾಜನಾಯಕ .ಎಸ್ ಡಿ ಎಂ ಸಿ ಅಧ್ಯಕ್ಷರಾದ ಚನ್ನಪ್ಪ ದೊರೆ. ಎಸ್ ಡಿ ಎಂ ಸಿ ಸರ್ವ ಸದಸ್ಯರು.ಯುವಟೀಮುಬಳಗದವರು ಗ್ರಾಮದ ಯುವಕರು ಮತ್ತು ಶಿಕ್ಷಕರು ಗ್ರಾಮಸ್ಥರು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಗುಣಮಟ್ಟ ಕುರಿತು ಮಾತಾಡಲು ಮೋದೀಜಿಗೆ ನೈತಿಕ ಹಕ್ಕು ಇಲ್ಲವೇ ಇಲ್ಲ!

ಸರ್ಕಾರಿ ಟೆಂಡರ್‌ಗಳಲ್ಲಿ 'ಅತಿ ಕಡಿಮೆ ದರ'ಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಗುಣಮಟ್ಟಕ್ಕಿಂತ ದರ ಮುಖ್ಯವಾದಾಗ, ಉದ್ಯಮಿಗಳು ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳುವುದು ಮಾಮೂಲು ಸಂಗತಿ. ಈ ಸತ್ಯವನ್ನು ಮೋದಿಜೀ ಒಪ್ಪಿಕೊಳ್ಳಲು ತಯಾರಿದ್ದಾರೆಯೇ? 'ಅತಿ ಕಡಿಮೆ ದರ'ದ ಟೆಂಡರ್‌ಗಳಲ್ಲಿ ಭ್ರಷ್ಟಾಚಾರ ಪಾಲು ಮಾತ್ರ ದೊಡ್ಡದು ಎಂಬುದನ್ನು ಪ್ರತ್ಯೇಕವಾಗಿ ಹೇಳಬೇಕಿಲ್ಲ. ಮೋದಿಯವರ ಮಾತು ಮತ್ತು ಕೃತಿಯ ನಡುವೆ ಇರುವ ಭಾರೀ ವೈರುಧ್ಯವಿದು.

77ನೇ ಗಣರಾಜ್ಯೋತ್ಸವದ ಹಿನ್ನೆಲೆಯಲ್ಲಿ 2026ರ ಹೊಸ ವರ್ಷದ ಮೊದಲ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶವನ್ನುದ್ದೇಶಿಸಿ ಮಾತನಾಡಿರುವ ಪ್ರಧಾನಿ ನರೇಂದ್ರ ಮೋದಿ, ''ಭಾರತದ ಆರ್ಥಿಕತೆ ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಜೈವಿಕ ತಂತ್ರಜ್ಞಾನದಲ್ಲಿ ಸಾಕಷ್ಟು ಸ್ಟಾರ್ಟ್ ಅಪ್‌ಗಳು ಆರಂಭವಾಗಿವೆ. ಭಾರತವು ವಿಶ್ವದಲ್ಲೇ ಮೂರನೇ ಅತಿದೊಡ್ಡ ಸ್ಟಾರ್ಟ್‌ಅಪ್ ಹಬ್ ಆಗಿ ಹೊರಹೊಮ್ಮುತ್ತಿದೆ. ಹೀಗಾಗಿ, ನಾವು ತಯಾರಿಸುವ ಪ್ರತಿಯೊಂದು ಉತ್ಪನ್ನದ ಗುಣಮಟ್ಟವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಸಂಕಲ್ಪ ಮಾಡಬೇಕು'' ಎಂದು ಕರೆ ನೀಡಿದ್ದಾರೆ.

''ಮೇಕ್ ಇನ್ ಇಂಡಿಯಾ ಉತ್ಪನ್ನಗಳು ಅತ್ಯುತ್ತಮ ಗುಣಮಟ್ಟದ್ದಾಗಿರಬೇಕು'' ಎಂದು ಮೋದಿ ಹೇಳಿರುವುದು ಆಕರ್ಷಕ ಘೋಷಣೆಯಂತೆ ಕೇಳಿಸುತ್ತದೆ. ಜಾಗತಿಕ ಮಾರುಕಟ್ಟೆಯಲ್ಲಿ ಭಾರತದ ಉತ್ಪನ್ನಗಳಿಗೆ ಗೌರವ ಸಿಗಬೇಕೆಂಬ ಆಶಯದಲ್ಲಿ ತಪ್ಪಿಲ್ಲ. ಆದರೆ ಪ್ರಶ್ನೆ ಏನೆಂದರೆ, ಈ ಗುಣಮಟ್ಟದ ಜವಾಬ್ದಾರಿ ಯಾರದ್ದು ಮತ್ತು ಅದಕ್ಕೆ ಅಗತ್ಯವಾದ ವ್ಯವಸ್ಥೆ ನಿಜಕ್ಕೂ ನಮ್ಮ ಆಡಳಿತದಲ್ಲಿ ನಿರ್ಮಾಣವಾಗಿದೆಯೇ?

ಹೌದು ನಿಜ. ಜಾಗತಿಕ ಮಾರುಕಟ್ಟೆಯಲ್ಲಿ ಭಾರತಕ್ಕೆ ತನ್ನದೇ ಆದ ಗುರುತು ಮೂಡಿಸಬೇಕಾದರೆ ಪ್ರಮಾಣಕ್ಕಿಂತ ಗುಣಮಟ್ಟಕ್ಕೆ ಮೊದಲ ಆದ್ಯತೆ ನೀಡಬೇಕಾದ ಅಗತ್ಯವಿದೆ. ಆದರೆ, ಗುಣಮಟ್ಟದ ಕಟುವಾಸ್ತವಗಳ ಬಗ್ಗೆ ಮೋದಿಯವರು ಮಾತನಾಡುವುದೇ ಇಲ್ಲ ಎಂಬುದು ಕೂಡ ಅಷ್ಟೇ ಬಹಿರಂಗ ಸತ್ಯ.

ಯಾಕೆಂದರೆ, ಪ್ರಧಾನಿಯವರು ತಮ್ಮ ಈ ಮಾತನ್ನು ತಮ್ಮದೇ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಲೋಕೋಪಯೋಗಿ ಇಲಾಖೆಗಳಿಗೆ ಅನ್ವಯಿಸಬೇಕು. ಹನ್ನೆರಡು ವರ್ಷವೇ ಕಳೆದರೂ ಗುಣಮಟ್ಟದ ಕಾಮಗಾರಿಗಳ ಕುರಿತು ಅವರು ಬಾಯಿ ಬಿಟ್ಟಿಲ್ಲ. ಪ್ರಧಾನಿ ನಿವಾಸದಲ್ಲೇ ಕುಳಿತು ಡ್ರೋನ್ ಕಳಿಸಿ ಕಾಮಗಾರಿಗಳ ಗುಣಮಟ್ಟ ತನಿಖೆ ಮಾಡಿಸುವುದಾಗಿ ಬಡಾಯಿ ಕೊಚ್ಚಿಕೊಂಡಿದ್ದರು. ಆದರೆ ಅದ್ಯಾವುದೂ ಕಾರ್ಯರೂಪಕ್ಕೆ ಇಳಿಯಲೇ ಇಲ್ಲ.

ದೇಶದಲ್ಲಿ ಕಳೆದ ಹನ್ನೆರಡು ವರ್ಷಗಳಿಂದ ಕಳಪೆ ಕಾಮಗಾರಿಗಳೇ ಒಂದು ಪಟ್ಟಿ ಮಾಡುವುದಾರೆ ಮೋದೀಜಿ ತವರು ರಾಜ್ಯ ಗುಜರಾತಿನಲ್ಲಿ ಕಳಪೆ ಕಾಮಗಾರಿಯಿಂದಾಗಿ ಅದೆಷ್ಟು ಸೇತುವೆಗಳು ಕುಸಿದು ಬಿದ್ದಿಲ್ಲ! 2022 ಅಕ್ಟೋಬರ್ 30ರಂದು ಗುಜರಾತ್‌ನ ಮೋರ್ಬಿ ನಗರದಲ್ಲಿ ತೂಗು ಸೇತುವೆ ಕುಸಿದ ಪರಿಣಾಮ 135 ಮಂದಿ ಮೃತಪಟ್ಟ ಘೋರ ದುರಂತವೇ ನಡೆದು ಹೋಯಿತು. ಈ ಸೇತುವೆಯು ಕಳಪೆ ಕಾಮಗಾರಿಯ ಕಾರಣವೇ ಕುಸಿಯಿತೆಂದು ತಜ್ಞರು ವರದಿ ನೀಡಿದರು.

ವಾರದ ಹಿಂದಿನ ಘಟನೆಯನ್ನೇ ನೋಡೋಣ. ಗುಜರಾತ್‌ನ ಸೂರತ್ ಜಿಲ್ಲೆಯಲ್ಲಿ 21 ಕೋಟಿ ರೂ. ವೆಚ್ಚದಲ್ಲಿ 33 ಹಳ್ಳಿಗಳಿಗೆ ಕುಡಿಯುವ ನೀರು ಪೂರೈಸುವುದಕ್ಕಾಗಿ ನೀರಿನ ಟ್ಯಾಂಕ್‌ವೊಂದನ್ನು ನಿರ್ಮಿಸಲಾಗಿತ್ತು. ಕಳೆದ ಜನವರಿ 19ರಂದು 11 ಲಕ್ಷ ಲೀಟರ್ ಸಾಮರ್ಥ್ಯದ 15 ಮೀಟರ್ ಎತ್ತರದ ಈ ನೀರಿನ ಟ್ಯಾಂಕ್ ಉದ್ಘಾಟನೆಗೂ ಮುನ್ನವೇ ಕುಸಿದುಬಿದ್ದಿದೆ. ನೀರಿನ ಟ್ಯಾಂಕ್ ನಿರ್ಮಿಸಲು ಬಳಸಿದ ನಿರ್ಮಾಣ ಸಾಮಗ್ರಿಗಳ ಗುಣಮಟ್ಟದ ಬಗ್ಗೆ ಗಂಭೀರ ಪ್ರಶ್ನೆಗಳಿವೆ.

ಇನ್ನು ತಮ್ಮದೇ ಬಿಜೆಪಿ ಅಧಿಕಾರ ಹಂಚಿಕೊಂಡಿರುವ ಬಿಹಾರದಲ್ಲಿ ಒಂದರ ಮೇಲೊಂದರಂತೆ ಸೇತುವೆಗಳು ಕುಸಿದಿದ್ದ ಸಾಲು ಸಾಲು ಪ್ರಕರಣಗಳಿವೆ. ಈ ಸರಣಿ ಕುಸಿತಗಳು ನಿತೀಶ್ ಕುಮಾರ್ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ ತೀವ್ರ ಮುಜುಗರ ಉಂಟು ಮಾಡಿದ್ದಿದೆ.

2014ರ ಲೋಕಸಭಾ ಚುನಾವಣೆಗೆ ಮುನ್ನ ಮೋದಿ, ತಮ್ಮ ನೂರಾರು ಭಾಷಣಗಳಲ್ಲಿ ಭ್ರಷ್ಟಾಚಾರ ನಿಗ್ರಹ ತಮ್ಮ ಸರ್ಕಾರದ ಮುಖ್ಯ ಕಾರ್ಯಸೂಚಿ ಎಂದು ಸಾರಿ ಸಾರಿ ಹೇಳಿದ್ದರು. ಯುಪಿಎ ಸರ್ಕಾರದ ಅವಧಿಯಲ್ಲಿ ಸುದ್ದಿ ಮಾಡಿದ್ದ 2ಜಿ ಹಗರಣ, ಕಾಮನ್ವೆಲ್ತ್ ಹಗರಣಗಳ ಹಿನ್ನೆಲೆಯಲ್ಲಿ ನ ಖಾವೂಂಗಾ, ನ ಖಾನೇ ದೂಂಗಾ ಎಂಬ ಘೋಷಣೆಯ ಮೂಲಕ ಭ್ರಷ್ಟಾಚಾರಕ್ಕೆ ಶೂನ್ಯ ಸಹಿಷ್ಣುತೆ ಎಂಬ ಸಂದೇಶ ನೀಡಿದ್ದರು. ಅಧಿಕಾರಕ್ಕೆ ಬಂದ ನಂತರ ಭ್ರಷ್ಟಾಚಾರ ನಿಗ್ರಹದ ಮೋದಿ ಮಾತುಗಳು ಪೊಳ್ಳಾಗಿ ಸುಳ್ಳಾಗಿ ಹೋಗಿವೆ. ನ ಖಾವೂಂಗಾ, ನ ಖಾನೇ ದೂಂಗಾ ಎಂದು ಎದೆಯುಬ್ಬಿಸಿ ಸಾರಿ ಹೇಳಿದ್ದ ಅದೇ ಮೋದಿಯವರಾ ಇವರು ಎನ್ನುವಷ್ಟರ ಮಟ್ಟಿಗೆ ಭ್ರಷ್ಟಾಚಾರವನ್ನು ಒಪ್ಪಿಕೊಂಡು ಮೌನಕ್ಕೆ ಶರಣಾಗಿದ್ದಾರೆ.

ಭ್ರಷ್ಟಾಚಾರದ ವಿಚಾರ ಬಂದಾಗ ಪ್ರತಿ ಭಾಷಣದಲ್ಲೂ ನೆಹರೂ ಅವರನ್ನು ಪದೇ ಪದೇ ನೆನಪಿಸಿಕೊಳ್ಳುವ ಪ್ರಧಾನಿ ಮೋದಿಯವರು, ನೆಹರೂ ಕಾಲದಲ್ಲಿ ನಿರ್ಮಿಸಿದ್ದ ಕಟ್ಟಡಗಳು, ಸೇತುವೆಗಳು, ರಸ್ತೆಗಳು ಇನ್ನೂ ಕೂಡ ಗುಣಮಟ್ಟ ಕಾಯ್ದುಕೊಂಡಿವೆ ಎಂಬುದರ ಬಗ್ಗೆ ಎಲ್ಲೂ ಮಾತೇ ಆಡುವುದಿಲ್ಲ. ಕೇಂದ್ರ ಸರ್ಕಾರದ ಪ್ರತಿಯೊಂದು ಬೃಹತ್ ಕಾಮಗಾರಿಗಳ ಟೆಂಡರ್‌ಗಳನ್ನು ಗುಜರಾತ್‌ನ ಅದಾನಿಯವರಿಗೇ ಸಿಗುವಂತೆ ನೋಡಿಕೊಳ್ಳುವ ಮೋಶಾ ಜೋಡಿ, ಅವುಗಳ ಗುಣಮಟ್ಟದ ಬಗ್ಗೆ ಯಾಕೆ ಬಾಯಿ ಬಿಡುವುದಿಲ್ಲ?

ಕಳೆದ ಒಂದು ದಶಕದಿಂದ ಮೇಕ್ ಇನ್ ಇಂಡಿಯಾ, ಆತ್ಮನಿರ್ಭರ ಭಾರತ, ವೋಕಲ್ ಫಾರ್ ಲೋಕಲ್ ಎಂಬ ಘೋಷಣೆಗಳ ಮೂಲಕ ದೇಶೀಯ ಉತ್ಪಾದನೆಗೆ ಉತ್ತೇಜನ ನೀಡಿರುವುದಾಗಿ ಮೋದಿ ಸರ್ಕಾರ ಹೇಳಿಕೊಂಡಿದೆ. ಈ ಘೋಷಣೆಗಳು ಕೇವಲ ಪ್ರಾಸಬದ್ಧ ಪೊಳ್ಳುಗಳಾಗಿ ಪರಿಣಮಿಸಿವೆ.

2021 ಮತ್ತು 2025 ರ ನಡುವೆ ಬಿಹಾರದಲ್ಲಿ 26, ಉತ್ತರಾಖಂಡದಲ್ಲಿ 25, ಹಿಮಾಚಲ ಪ್ರದೇಶದಲ್ಲಿ 17 ಹಾಗೂ ಗುಜರಾತಿನಲ್ಲಿ 16 ಸೇತುವೆ ಕುಸಿತ ಘಟನೆಗಳು ಸಂಭವಿಸಿವೆ. ಮಾಧ್ಯಮ ವರದಿಗಳ ಪ್ರಕಾರ, 2024 ರ ವರ್ಷವೊಂದರಲ್ಲೇ ಬಿಹಾರದಲ್ಲಿ 15 ಸೇತುವೆ ಕುಸಿತ ಘಟನೆಗಳು ವರದಿಯಾಗಿತ್ತು. 2021 ಮತ್ತು 2025 ರ ನಡುವೆ ಒಟ್ಟು 170 ಸೇತುವೆ ಕುಸಿತ ಘಟನೆಗಳು ಸಂಭವಿಸಿದೆ. ಈ ಎಲ್ಲ ಘಟನೆಗಳಲ್ಲಿ 202 ಜನರು ಸಾವನ್ನಪ್ಪಿದ್ದಾರೆ ಮತ್ತು 441 ಜನರು ಗಾಯಗೊಂಡಿದ್ದಾರೆ ಎಂದು ಸರ್ಕಾರವೇ ಒಪ್ಪಿಕೊಂಡಿದೆ.

ಕಳೆದ ಐದು ವರ್ಷಗಳಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕಾರ್ಯಗತಗೊಳಿಸಿದ ರಸ್ತೆಗಳು, ಸೇತುವೆಗಳು ಮತ್ತು ಸುರಂಗ ಯೋಜನೆಗಳಲ್ಲಿ ಒಟ್ಟು 55 ಕುಸಿತ ಅಥವಾ ಹಾನಿ ಪ್ರಕರಣಗಳು ವರದಿಯಾಗಿವೆ ಎಂಬುದನ್ನು ಸ್ವತಃ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿಯವರು ಕಳೆದ ವರ್ಷ ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಮಾಹಿತಿ ನೀಡಿದ್ದರು.

ಹಾಗಾದರೆ ಕಳೆದ ಹತ್ತು ವರ್ಷಗಳಲ್ಲಿ ನೆಲಕಚ್ಚಿರುವುದಕ್ಕೆ ಯಾರು ಹೊಣೆಗಾರರು? ಕುಸಿತದ ಹೊಣೆ ಯಾರದ್ದು? ತಾನು ನೇರವಾಗಿ ಇಲ್ಲವೇ ಮಿತ್ರಪಕ್ಷಗಳ ಜೊತೆ ಕೈಗೂಡಿಸಿ 21 ರಾಜ್ಯಗಳಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಕೇಂದ್ರ ಸರ್ಕಾರ ಇದ್ದೇ ಇದೆ. ಈ ರಾಜ್ಯಗಳ ಲೋಕೋಪಯೋಗಿ ಇಲಾಖೆಗಳು, ಕೇಂದ್ರ ಸರ್ಕಾರದ ಸಿಪಿಡಬ್ಲ್ಯೂಡಿ ಕಳಪೆ ಕಾಮಗಾರಿಯ ಜವಾಬ್ದಾರಿ ಹೊರಬೇಕಲ್ಲವೇ? ಹಾಗಿದ್ದರೆ ಗುಣಮಟ್ಟದ ಪಾಠವನ್ನು ಮೋದಿ ಯಾರಿಗೆ ಹೇಳಬೇಕು. ನೀತಿಪಾಠವನ್ನು, ಭ್ರಷ್ಟಾಚಾರ ನಿಗ್ರಹವನ್ನು ತಮ್ಮ ಮನೆಯಿಂದಲೇ ಶುರು ಮಾಡಬೇಕು. ತಮ್ಮ ಮೂಗಿನ ಕೆಳಗೇ ನಡೆಯುತ್ತಿರುವ ಬ್ರಹ್ಮಾಂಡ ಭ್ರಷ್ಟಾಚಾರದತ್ತ ಕುರುಡುಗಣ್ಣು ಹರಿಸಿ ಗುಣಮಟ್ಟದ ಕುರಿತು ಭಾಷಣ ಬಿಗಿಯುವುದು ಕೇವಲ ಅವಕಾಶವಾದ ಮತ್ತು ಅಪ್ಪಟ ಡಂಭಾಚಾರ.

2014ರಿಂದ ದೇಶವನ್ನು ಆಳುತ್ತಿರುವ ಮೋದಿ ಸರ್ಕಾರವು ಗುಣಮಟ್ಟ ಎಂಬ ಪದವನ್ನು ಈಗ ಸಂಶೋಧನೆ ನಡೆಸಿ ಕಂಡು ಹಿಡಿದಂತೆ ಮಾತನಾಡುತ್ತಿರುವುದು ತಮಾಷೆಯಾಗಿಯೂ, ವಿಡಂಬನೆ- ದುರಂತಗಳಂತೆಯೂ ಧ್ವನಿಸುತ್ತದೆ.

ಗುಣಮಟ್ಟ ಎಂಬುದು ಪೊಳ್ಳು ಭಾಷಣಗಳಿಂದ ಹುಟ್ಟುವುದಿಲ್ಲ; ಅದು ಕಠಿಣ ಗುಣಮಟ್ಟ ನಿಯಂತ್ರಣ, ಪಾರದರ್ಶಕ ಮೇಲ್ವಿಚಾರಣೆ ಮತ್ತು ತಪ್ಪುಗಳಿಗೆ ನಿರ್ದಾಕ್ಷಿಣ್ಯ ಶಿಕ್ಷೆಯಿಂದ ಮಾತ್ರ ಸಾಧ್ಯ. ಆದರೆ ವಾಸ್ತವದಲ್ಲಿ ಗುಣಮಟ್ಟ ನಿಯಂತ್ರಣ ಸಂಸ್ಥೆಗಳು ಮೂಲೆಗುಂಪಾಗಿವೆ. ರಾಜಕೀಯ ಹಸ್ತಕ್ಷೇಪ ಸರ್ವೇಸಾಮಾನ್ಯವಾಗಿವೆ. ಭ್ರಷ್ಟಾಚಾರ ದೊಡ್ಡಮಟ್ಟದಲ್ಲಿ ನಡೆಯುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ಪ್ರಧಾನಿ ಮೋದಿಯವರು ಜಾಗತಿಕ ಮಟ್ಟದ ಗುಣಮಟ್ಟದ ಭಾಷಣಕ್ಕೆ ಯಾವ ಅರ್ಥವೂ ಇಲ್ಲ.

ಸರ್ಕಾರಿ ಟೆಂಡರ್‌ಗಳಲ್ಲಿ ಅತಿ ಕಡಿಮೆ ದರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಗುಣಮಟ್ಟಕ್ಕಿಂತ ದರ ಮುಖ್ಯವಾದಾಗ, ಉದ್ಯಮಿಗಳು ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳುವುದು ಮಾಮೂಲು ಸಂಗತಿ. ಈ ಸತ್ಯವನ್ನು ಮೋದಿಜೀ ಒಪ್ಪಿಕೊಳ್ಳಲು ತಯಾರಿದ್ದಾರೆಯೇ? ಅತಿ ಕಡಿಮೆ ದರದ ಟೆಂಡರ್‌ಗಳಲ್ಲಿ ಭ್ರಷ್ಟಾಚಾರ ಪಾಲು ಮಾತ್ರ ದೊಡ್ಡದು ಎಂಬುದನ್ನು ಪ್ರತ್ಯೇಕವಾಗಿ ಹೇಳಬೇಕಿಲ್ಲ. ಮೋದಿಯವರ ಮಾತು ಮತ್ತು ಕೃತಿಯ ನಡುವೆ ಇರುವ ಭಾರೀ ವೈರುಧ್ಯವಿದು.

ಆದ್ದರಿಂದ ಪ್ರಧಾನಿ ಮೋದಿಯವರು ಮನ್ ಕಿ ಬಾತ್‌ನಲ್ಲಿ ಹೇಳಿದ ಹಾಗೆ, ಮೇಕ್ ಇನ್ ಇಂಡಿಯಾ ಗುಣಮಟ್ಟಕ್ಕೆ ಮಾದರಿ ಆಗಬೇಕಿದ್ದರೆ, ಮೋದಿ ಸರ್ಕಾರ ನುಡಿದಂತೆ ನಡೆಯಬೇಕು. ಟೊಳ್ಳು ಘೋಷಣೆಗಳ ನಾಟಕವನ್ನು ಕೈಬಿಡಬೇಕು. ಕಠಿಣ ಗುಣಮಟ್ಟ ಪರಿಶೀಲನೆ, ಜವಾಬ್ದಾರಿಯುತ ಆಡಳಿತ ಮತ್ತು ವಿಫಲತೆಗಳಿಗೆ ನೈತಿಕ ಹೊಣೆಗಾರಿಕೆ ಹೊರಬೇಕು. ಸರ್ಕಾರ ಮೊಟ್ಟಮೊದಲು ತನ್ನ ಆಡಳಿತದ ಗುಣಮಟ್ಟವನ್ನು ಪರೀಕ್ಷೆಗೆ ಒಡ್ಡಬೇಕು. ಇಲ್ಲದಿದ್ದರೆ ಅತ್ಯುತ್ತಮ ಗುಣಮಟ್ಟ ಎಂಬ ಮಾತು ಮತ್ತೊಂದು ರಾಜಕೀಯ ಭಾಷಣವಾಗಿ ಇತಿಹಾಸದ ಕಡತಗಳಲ್ಲಿ ಹೂತು ಹೋಗುತ್ತದೆ ಅಷ್ಟೇ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಟ್ಯಾಂಕರ್‌ನಲ್ಲಿ ಸಾಗಿಸುತ್ತಿದ್ದ ₹400 ಕೋಟಿ ದರೋಡೆ! ಹವಾಲಾ ಹಣದ ಶಂಕೆ

ನಾಸಿಕ್ ಮೂಲದ ರಿಯಲ್ ಎಸ್ಟೇಟ್ ಏಜೆಂಟ್ ಸಂದೀಪ್ ಪಾಟೀಲ್ ಸಲ್ಲಿಸಿದ ಪೊಲೀಸ್ ದೂರಿನ ಪ್ರಕಾರ, ಕರ್ನಾಟಕದ ಬಿಲ್ಡರ್ ಒಬ್ಬರು ಈ ಹಣವನ್ನು ಅಹಮದಾಬಾದ್‌ನ ಆಶ್ರಮಕ್ಕೆ ಕಳುಹಿಸಿದ್ದು, ಅದನ್ನು ಕಾನೂನುಬದ್ಧ ನಗದನ್ನಾಗಿ ಪರಿವರ್ತಿಸಲು ಕಳುಹಿಸಿದ್ದಾರೆ. ಈ ಹಣವನ್ನು ಥಾಣೆ ಮೂಲದ ರಾಜಕಾರಣಿಯೊಬ್ಬರು ಬಳಸುತ್ತಿದ್ದರು ಎಂದು ತಿಳಿದುಬಂದಿದೆ, ಅವರು ಬಿಲ್ಡರ್‌ಗೆ ಆಪ್ತರು ಎಂದು ವರದಿಯಾಗಿದೆ.

ದೇಶದ ರಾಜಕೀಯ, ಆಡಳಿತ ಹಾಗೂ ಭದ್ರತಾ ವಲಯದಲ್ಲಿ ಸಂಚಲನ ಮೂಡಿಸುವ ಘಟನೆಯೊಂದು ನಡೆದಿದೆ. ಗೋವಾದಿಂದ ಮಹಾರಾಷ್ಟ್ರಕ್ಕೆ 400 ಕೋಟಿ ರೂಪಾಯಿ ಸಾಗಿಸುತ್ತಿದ್ದ ಕಂಟೇನರನ್ನು ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಛೋರ್ಲಾ ಘಾಟ್‌ನಲ್ಲಿ ಹೈಜಾಕ್ ಮಾಡಲಾಗಿದೆ ಎಂದು ಹೇಳಲಾಗಿದೆ. ಈ ದರೋಡೆಯು ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ರಾಜ್ಯಗಳ ಗಡಿಯಲ್ಲಿ ನಡೆದಿದ್ದು, ಮೂರು ರಾಜ್ಯಗಳ ಪೊಲೀಸರು ಸಹಯೋಗದೊಂದಿಗೆ ತನಿಖೆ ನಡೆಸುತ್ತಿದ್ದಾರೆ. ಟ್ಯಾಂಕರ್ ಲಾರಿಗಳಲ್ಲಿ ಮುಚ್ಚಿ ಸಾಗಿಸುತ್ತಿರುವ ಅನುಮಾನವಿರುದ ಈ ಪ್ರಕರಣವು ಹವಾಲಾ ನೆಟ್‌ವರ್ಕ್, ರಾಜಕೀಯ ಸಂಬಂಧಗಳು ಮತ್ತು ಭ್ರಷ್ಟಾಚಾರದ ಆರೋಪಗಳನ್ನು ಹೊತ್ತುಕೊಂಡಿದೆ.

ಘಟನೆಯು 2025ರ ಅಕ್ಟೋಬರ್ 25ರ ರಾತ್ರಿ ಚೋರ್ಲಾ ಘಾಟ್‌ನಲ್ಲಿ ನಡೆದಿದೆ. ಚೋರ್ಲಾ ಘಾಟ್ ಕರ್ನಾಟಕ-ಗೋವಾ ಗಡಿಯ ಸಮೀಪದಲ್ಲಿ ಇದ್ದು, ಮಹಾರಾಷ್ಟ್ರಕ್ಕೂ ಸಂಪರ್ಕ ಹೊಂದಿದ ತ್ರಿಜಂಕ್ಷನ್ ಏರಿಯಾ. ಇದೊಂದು ಪಕ್ಕಾ ಕ್ರೈಂ ಥ್ರಿಲ್ಲರ್ ಸಿನಿಮಾ ಕಥೆಯಂತಿದೆ. ನಾಸಿಕ್ ಮೂಲದ ವ್ಯಕ್ತಿಯ ಕಿಡ್ನಾಪ್ ಕೇಸ್ ಇಟ್ಕೊಂಡು ತನಿಖೆ ಮಾಡ್ತಿದ್ದ ಮಹಾರಾಷ್ಟ್ರ ಪೊಲೀಸರಿಗೆ ಈ ಸ್ಫೋಟಕ ಮಾಹಿತಿ ಸಿಕ್ಕಿದೆ. ಹಳೆ ನೋಟು ಸಾಗಾಟ ಮಾಡ್ತಿದ್ರಾ? ಅಥವಾ ಇದು ಹವಾಲಾ ಹಣನಾ? ಸದ್ಯಕ್ಕೆ ಬೆಳಗಾವಿ ಎಸ್ಪಿ ಕೆ.ರಾಮರಾಜನ್ ಈ ಬಗ್ಗೆ ತನಿಖೆ ಹಾಗೂ ಮಾಹಿತಿ ನೀಡಿದ್ದು, ಗಡಿ ಭಾಗದಲ್ಲಿ ಹೈ ಅಲರ್ಟ್ ಘೋಷಿಸಲಾಗಿದೆ. ಅಪರಾಧದ ಇತಿಹಾಸದಲ್ಲೇ ಬೆಚ್ಚಿಬೀಳಿಸುವ ಅತಿದೊಡ್ಡ ದರೋಡೆ ಪ್ರಕರಣ ಇದಾಗಿದೆ ಎನ್ನಲಾಗುತ್ತಿದೆ.

ಜನವರಿ 6ರಂದು ನಾಸಿಕ್ ಜಿಲ್ಲಾ ವರಿಷ್ಠಾಧಿಕಾರಿಗಳಿಂದ ಬೆಳಗಾವಿ ಪೊಲೀಸರಿಗೆ ಒಂದು ಪತ್ರ ಬರುತ್ತೆ. ವಿಷಯ ಓದಿ ಬೆಳಗಾವಿ ಪೊಲೀಸರೇ ದಂಗಾಗಿದ್ದಾರೆ. ''ನಿಮ್ಮ ಏರಿಯಾದ ಚೋರ್ಲಾ ಘಾಟ್‌ನಲ್ಲಿ ದೊಡ್ಡ ದರೋಡೆಯಾಗಿದೆ, ಬರೋಬ್ಬರಿ 400 ಕೋಟಿ ರೂಪಾಯಿ ಲೂಟಿ ಮಾಡಿದ್ದಾರೆ'' ಅನ್ನೋ ಉಲ್ಲೇಖ ಆ ಪತ್ರದಲ್ಲಿತ್ತು. ಈ ಹಣ ಹಳೆಯ ನೋಟುಗಳಾಗಿರಬಹುದು ಅನ್ನೋ ಶಂಕೆ ಕೂಡ ವ್ಯಕ್ತವಾಗಿದೆ. ಅಷ್ಟಕ್ಕೂ ಈ ವಿಷಯ ಹೊರಬಂದಿದ್ದು ಒಂದು ಕಿಡ್ನಾಪ್ ಕೇಸ್‌ನಿಂದ. ಅಕ್ಟೋಬರ್ 22ರಂದು ನಾಸಿಕ್‌ನಲ್ಲಿ ಸಂದೀಪ್ ಪಾಟೀಲ್ ಅನ್ನೋ ವ್ಯಕ್ತಿಯನ್ನ ವಿಶಾಲ್ ನಾಯ್ಡು ಅನ್ನೋ ರೌಡಿ ಕಿಡ್ನಾಪ್ ಮಾಡಿದ್ದ. ಈ ಕೇಸ್ ತನಿಖೆ ಮಾಡುವಾಗ, ಸ್ವತಃ ಕಿಡ್ನಾಪ್ ಆಗಿದ್ದ ಸಂದೀಪ್ ಪಾಟೀಲ್ ಪೊಲೀಸರ ಮುಂದೆ ಬಾಯಿಬಿಟ್ಟಿದ್ದಾನೆ.

ನಾಸಿಕ್ ಮೂಲದ ಸಂದೀಪ್ ಪಾಟೀಲ್ ಎಂಬಾತನ ಅಪಹರಣದಿಂದ ಪ್ರಕರಣ ಇದೀಗ ಬೆಳಕಿಗೆ ಬಂದಿದೆ. ಕಂಟೇನರ್ ರಾಬರಿ ಆದ ಬಳಿಕ ಮಹಾರಾಷ್ಟ್ರ ರಿಯಲ್ ಎಸ್ಟೇಟ್ ಉದ್ಯಮಿ ಕಿಶೋರ್ ಶೇಟ್ ಸಹಚರರು ಸಂದೀಪ್ ಪಾಟೀಲ್‌ಗೆ ಗನ್ ಪಾಯಿಂಟ್ ತೋರಿಸಿ ಅಪಹರಿಸಿದ್ದರು. ಒಂದೂವರೆ ತಿಂಗಳು ಒತ್ತೆಯಾಳಾಗಿಸಿಕೊಂಡು ಚಿತ್ರಹಿಂಸೆ ನೀಡಿದ್ದಾರೆ. ಕಂಟೇನರ್ ಹೈಜಾಕ್‌ಗೆ ನೀನೇ ಕಾರಣ ಎಂದು ಸಂದೀಪ್‌ಗೆ ಚಿತ್ರಹಿಂಸೆ ನೀಡಿದ್ದಾರೆ. 400 ಕೋಟಿ ರೂ ಹಣ ಕೊಡದಿದ್ದರೆ ಜೀವ ತೆಗೆಯುತ್ತೇವೆಂದು ಬೆದರಿಕೆ ಹಾಕಿದ್ದಾರೆ. ಅಪಹರಣಕಾರರಿಂದ ತಪ್ಪಿಸಿಕೊಂಡು ಬಂದ ಸಂದೀಪ್ ನಾಸಿಕ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. 400 ಕೋಟಿ ರೂ ಹಣದ ವಾಹನ ಅಪಹರಿಸಿರುವ ಬಗ್ಗೆ ಸಂದೀಪ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

''ಕಿಡ್ನಾಪರ್ಸ್ ನನ್ನ ಹತ್ರ ಮಾತಾಡುವಾಗ 400 ಕೋಟಿ ದರೋಡೆ ಬಗ್ಗೆ ಚರ್ಚೆ ಮಾಡ್ತಿದ್ರು'' ಅಂತ ಹೇಳಿದ್ದಾನೆ. ಅಕ್ಟೋಬರ್ 16ರಂದು ಈ ಮಹಾ ದರೋಡೆ ನಡೆದಿದೆ ಎನ್ನಲಾಗಿದೆ. ಸದ್ಯಕ್ಕೆ ಖಾನಾಪುರದ ಸಬ್ ಇನ್ಸ್ ಪೆಕ್ಟರ



ನೇತೃತ್ವದ ಟೀಂ ಅಲ್ಲಿಗೆ ಹೋಗಿ ಪರಿಶೀಲನೆ ನಡೆಸಿದೆ. ವಿಚಿತ್ರ ಅಂದ್ರೆ, ಇಷ್ಟು ದೊಡ್ಡ ಮೊತ್ತ ಕಳ್ಕೊಂಡ್ರೂ ಯಾರೂ ಬಂದು ದೂರು ಕೊಟ್ಟಿಲ್ಲ. ದೂರು ಬಂದ್ರೆ ಎಫ್‌ಐಆರ್ ಹಾಕ್ತಿವಿ ಅಂತ ಎಸ್ಪಿ ಹೇಳಿದ್ದಾರೆ. ಸದ್ಯ ರಾಬರಿ ಆಗಿರುವ ಭಾರೀ ಮೊತ್ತವು ಮಹಾರಾಷ್ಟ್ರ ರಿಯಲ್ ಎಸ್ಟೇಟ್ ಉದ್ಯಮಿ ಕಿಶೋರ್ ಶೇಟ್‌ಗೆ ಸೇರಿದ್ದು ಎನ್ನಲಾಗುತ್ತಿದೆ.

ಇನ್ನು ಇತ್ತ ಸಂದೀಪ್ ಪಾಟೀಲ್ ವಿಡಿಯೋ ಹೇಳಿಕೆಯೊಂದು ಬಿಡುಗಡೆ ಮಾಡಿದ್ದು, ಮಹಾರಾಷ್ಟ್ರದಲ್ಲಿ ಸಂಚಲನ ಸೃಷ್ಟಿಸಿದೆ. ಇದು 400 ಕೋಟಿ ರೂ ಅಲ್ಲ 1000 ಕೋಟಿ ರೂ ಪ್ರಕರಣ. ಚೋರ್ಲಾ ಘಾಟ್‌ನಲ್ಲಿ ರದ್ದಾದ 2000 ಮುಖಬೆಲೆಯ ನೋಟು ತುಂಬಿದ ಹಣದ ಕಂಟೇನರ್ ಗಯಾಬ್ ಆಗಿದೆ. ಕಂಟೇನರ್ ಗಯಾಬ್ ಮಾಡಿದ ಆರೋಪಿಗಳು ಬಿಲ್ಡರ್ ಕಿಶೋರ್‌ಗೆ ನನ್ನ ಹೆಸರಿನಿಂದ ಕರೆ ಮಾಡಿ 100 ಕೋಟಿ ರೂ ಡಿಮ್ಯಾಂಡ್ ಮಾಡಲಾಗಿದೆ. ಆಗ ಕಿಶೋರ್ ಸಹಚರರು ನನ್ನ ಕಿಡ್ನ್ಯಾಪ್ ಮಾಡಿ ಚಿತ್ರಹಿಂಸೆ ಕೊಟ್ಟು ಬಿಡುಗಡೆ ಮಾಡಿದ್ದಾರೆ. ಮಹಾರಾಷ್ಟ್ರದ ಇಬ್ಬರು ಪೊಲೀಸ್ ಅಧಿಕಾರಿಗಳೇ ನನಗೆ ವಾಟ್ಸ ಪ್ ಕರೆ ಮಾಡಿ ಬೆದರಿಕೆ ಹಾಕಿದ್ದರು. ಹೀಗಾಗಿ ಕೆಲದಿನ ಜೀವ ಭಯದಿಂದ ಸುಮ್ಮನಾಗಿದ್ದೆ. ಈ ವಿಚಾರ ಎಲ್ಲಿಯೂ ಬಾಯಿ ಬಿಡದಂತೆ ಪೊಲೀಸ್ ಅಧಿಕಾರಿಗಳ ಮೂಲಕ ಒತ್ತಡ ಹಾಕಲು ಯತ್ನಿಸಿದ್ದರು. ಆದರೂ ದೂರು ದಾಖಲಿಸಿರುವೆ. ನನ್ನ ಜೀವಕ್ಕೆ ತೊಂದರೆ ಆದರೆ ಬಿಲ್ಡರ್ ಕಿಶೋರ್ ಮತ್ತವರ ಸಹಚರರೇ ಹೊಣೆಗಾರರು ಎಂದು ಸಂದೀಪ್ ಪಾಟೀಲ್‌ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ಆ ಪತ್ರದಲ್ಲಿ ''ಓಲ್ಡ್ 400 ಕ್ರೋ'' ಅಂತ ಉಲ್ಲೇಖ ಇರೋದ್ರಿಂದ, ಇದು ಅಮಾನ್ಯಗೊಂಡ ಹಳೆಯ ನೋಟುಗಳ ಸಾಗಾಟನಾ ಅನ್ನೋ ಡೌಟ್ ಶುರುವಾಗಿದೆ. ಬ್ಲ್ಯಾಕ್ ಮನಿ ಆಗಿರೋದ್ರಿಂದಲೇ ಹಣ ಕಳೆದುಕೊಂಡವರು ಪೊಲೀಸ್ ಸ್ಟೇಷನ್ ಮೆಟ್ಟಿಲು ಹತ್ತುತ್ತಿಲ್ಲವಾ? ಅನ್ನೋದು ಈಗಿನ ಯಕ್ಷಪ್ರಶ್ನೆ. ಮಹಾರಾಷ್ಟ್ರದಲ್ಲಿ ಈಗಾಗಲೇ ಎಸ್‌ಐಟಿ ರಚನೆಯಾಗಿದ್ದು, ತನಿಖೆ ಚುರುಕಾಗಿದೆ. ಬೆಳಗಾವಿ ಪೊಲೀಸರು ಕೂಡ ಪೂರ್ಣ ಸಹಾಯ ಮಾಡುತ್ತಿದ್ದಾರೆ. ಚೋರ್ಲಾ ಘಾಟ್‌ನಲ್ಲಿ ಕಳ್ಳತನ ತಪ್ಪಿಸಲು ಹೊಸ ಹೈ-ಟೆಕ್ ಸಿಸಿಟಿವಿ ಅಳವಡಿಸಲು ಪ್ಲಾನ್ ಸಿದ್ಧವಾಗಿದೆ. ಒಟ್ಟಿನಲ್ಲಿ ಆ 400 ಕೋಟಿ ಎಲ್ಲಿಗೆ ಹೋಯ್ತು ಅನ್ನೋದು ಮಾತ್ರ ಇನ್ನೂ ಮಿಸ್ಟರಿ.

400 ಕೋಟಿ ಎಂದರೆ ಸಾವಿರಾರು ಬಡ ಕುಟುಂಬಗಳ ಜೀವನ, ಸಾವಿರಾರು ಮಕ್ಕಳ ಶಿಕ್ಷಣ, ಲಕ್ಷಾಂತರ ಜನರ ಶ್ರಮದ ತೆರಿಗೆ ಹಣ. ಈ ದರೋಡೆ ಪ್ರಕರಣದ ತನಿಖೆಯಲ್ಲಿ ಮಹಾರಾಷ್ಟ್ರ ಪೊಲೀಸರು ಸಹಕಾರ ನೀಡುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ಪ್ರಕರಣದ ತನಿಖೆಗೆ ಸಂಬಂಧಿಸಿ ಬೆಳಗಾವಿ ಪೊಲೀಸ್ ಅಧಿಕಾರಿಗಳು ಮಹಾರಾಷ್ಟ್ರದ ನಾಸಿಕ್‌ಗೆ ತೆರಳಿದ್ದು, ಬಂಧಿತರ ವಿಚಾರಣೆಗೆ ಅವಕಾಶ ನೀಡುವಂತೆ ಪ್ರಯತ್ನ ನಡೆಸಿದ್ದಾರೆ. ಪ್ರಕರಣ ಬೆಳಕಿಗೆ ಬಂದ ಬಳಿಕ ಮಹಾರಾಷ್ಟ್ರ ವಿಶೇಷ ತನಿಖಾ ತಂಡ (ಎಸ್‌ಐಟಿ) ಬೆಳಗಾವಿ ಪೊಲೀಸರಿಗೆ ಸಹಕಾರ ನೀಡುವಂತೆ ಪತ್ರ ಬರೆದಿತ್ತು. ಈ ಪತ್ರ ಬಂದ ತಕ್ಷಣ ಬೆಳಗಾವಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ಅಲರ್ಟ್ ಆಗಿ, ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿವೈಎಸ್‌ಪಿ) ನೇತೃತ್ವದ ಕರ್ನಾಟಕ ಪೊಲೀಸ್ ತಂಡವನ್ನು ನಾಸಿಕ್‌ಗೆ ರವಾನಿಸಿದ್ದರು. ಕಂಟೇನರ್‌ಗಳಲ್ಲಿ ಸಾಗಿಸಲಾಗುತ್ತಿದ್ದ ಹಣವನ್ನ ಎಲ್ಲಿಂದ ಎಲ್ಲಿಗೆ ಸಾಗಿಸಲಾಗುತ್ತಿತ್ತು? ಆ ಕಂಟೇನರ್‌ಗಳು ಕರ್ನಾಟಕ ರಾಜ್ಯ ಗಡಿಯನ್ನು ಪ್ರವೇಶಿಸಿದ್ದವೆಯೇ? ಎಂದು ಪತ್ತೆಗೆ ಕರ್ನಾಟಕ ಪೊಲೀಸರು ಮುಂದಾಗಿದ್ದಾರೆ.

ನಾಸಿಕ್ ಮೂಲದ ರಿಯಲ್ ಎಸ್ಟೇಟ್ ಏಜೆಂಟ್ ಸಂದೀಪ್ ಪಾಟೀಲ್ ಸಲ್ಲಿಸಿದ ಪೊಲೀಸ್ ದೂರಿನ ಪ್ರಕಾರ, ಕರ್ನಾಟಕದ ಬಿಲ್ಡರ್ ಒಬ್ಬರು ಈ ಹಣವನ್ನು ಅಹಮದಾಬಾದ್‌ನ ಆಶ್ರಮಕ್ಕೆ ಕಳುಹಿಸಿದ್ದು, ಅದನ್ನು ಕಾನೂನುಬದ್ಧ ನಗದನ್ನಾಗಿ ಪರಿವರ್ತಿಸಲು ಕಳುಹಿಸಿದ್ದಾರೆ. ಈ ಹಣವನ್ನು ಥಾಣೆ ಮೂಲದ ರಾಜಕಾರಣಿಯೊಬ್ಬರು ಬಳಸುತ್ತಿದ್ದರು ಎಂದು ತಿಳಿದುಬಂದಿದೆ, ಅವರು ಬಿಲ್ಡರ್‌ಗೆ ಆಪ್ತರು ಎಂದು ವರದಿಯಾಗಿದೆ.

ಇದಲ್ಲದೆ, ಹವಾಲಾ ಆಪರೇಟರ್‌ಗಳ ಸಂಬಂಧವಿದ್ದು, ಐದು ಆರೋಪಿಗಳು ಜಯೇಶ್ ಕದಮ್, ವಿಶಾಲ್ ನಾಯ್ಡು, ಸುನಿಲ್ ಧುಮಾಲ್, ವಿರಾಟ್ ಗಾಂಧಿ ಮತ್ತು ಜನಾರ್ಧನ್ ಧೈಗುಡೆ ಬಂಧನಕ್ಕೀಡಾಗಿದ್ದಾರೆ. ಇನ್ನೂ ಇಬ್ಬರು ಶಂಕಿತರನ್ನು ಹುಡುಕಲಾಗುತ್ತಿದೆ. ಇಷ್ಟು ದೊಡ್ಡ ಮೊತ್ತದ ಹಣದ ಬಗ್ಗೆ ಗಂಭೀರ ಶಂಕೆಗಳು ಹೊರಬಿದ್ದರೂ, ರಾಜಕೀಯ ವಲಯದಿಂದ ಸ್ಪಷ್ಟ ಪ್ರತಿಕ್ರಿಯೆಗಳು ಕಾಣಿಸದಿರುವುದು ಮತ್ತಷ್ಟು ಅನುಮಾನ ಹುಟ್ಟಿಸುತ್ತಿದೆ. ಈ ಪ್ರಕರಣವನ್ನು ಗಂಭೀರವಾಗಿ ತನಿಖೆ ನಡೆಸದೇ ಹೋದರೆ, ಡೀಮೋನಿಟೈಜೇಶನ್ ಎಂಬ ನಿರ್ಧಾರವೇ ಪ್ರಶ್ನಾರ್ಹವಾಗುತ್ತದೆ. ಗೋವಾಕ್ಕೆ ಹೋಗುವ ಟ್ಯಾಂಕರ್, ಮಹಾರಾಷ್ಟ್ರ ದಾಟುವ ಲಾರಿ, ಕರ್ನಾಟಕದಲ್ಲಿ ಅಡಗಿಸುವ ಗೋದಾಮು ಇದು ನಮ್ಮ ದೇಶದ ವಾಸ್ತವ. ಕರ್ನಾಟಕ ಪೊಲೀಸರು ಈಗ ಗೋವಾಮಹಾರಾಷ್ಟ್ರ ಪೊಲೀಸರೊಂದಿಗೆ ಕೈಜೋಡಿಸಿದ್ದಾರೆ. ಒಳ್ಳೆಯದು. ಆದರೆ ಇಷ್ಟು ವರ್ಷ ಎಲ್ಲಿದ್ದರು?

ಈ ಟ್ಯಾಂಕರ್‌ಗಳು ನಿನ್ನೆ ಮೊನ್ನೆ ಹುಟ್ಟಿರುವುದಲ್ಲ. ಈ ಜಾಲ ನಿನ್ನೆ ಮೊನ್ನೆ ರೂಪುಗೊಂಡದ್ದಲ್ಲ. ಅಂದರೆ ಯಾರೋ ನೋಡಿದ್ದಾರೆ, ಯಾರೋ ಗೊತ್ತಿದ್ದರೂ ಮೌನವಾಗಿದ್ದಾರೆ, ಯಾರೋ ಪಾಲನ್ನೂ ಪಡೆದಿದ್ದಾರೆ. ಇಲ್ಲದಿದ್ದರೆ, 400 ಕೋಟಿ ಇಷ್ಟು ಸುಲಭವಾಗಿ ಓಡಾಡಲು ಸಾಧ್ಯವೇ?

ಜನರಿಗೆ ಅಂದು ಕಾಗೆ ಹಾರಿಸಿದ್ದರು. ''ಕಪ್ಪು ಹಣ ನಾಶವಾಗುತ್ತದೆ'' ಅಂತ. ನಾಶವಾಯಿತಾ? ಅಥವಾ ಟ್ಯಾಂಕರ್ ಲಾರಿಗಳಲ್ಲಿ ಇನ್ನೂ ಸುರಕ್ಷಿತವಾಗಿ ಓಡಾಡುತ್ತಿದೆಯಾ? ಡಿಮೊನಟೈಸೇಷನ್ ದಿನಗಳಲ್ಲಿ ಜನ ಸಾಲಿನಲ್ಲಿ ನಿಂತರು, ವೃದ್ಧರು ಪ್ರಾಣ ಕಳೆದುಕೊಂಡರು. ಸಣ್ಣ ವ್ಯಾಪಾರಿಗಳ ಬದುಕು ಬೀದಿಪಾಲಾಯಿತು. ಆದರೆ 400 ಕೋಟಿ ರೂಪಾಯಿ ಮಾತ್ರ ಬದುಕುಳಿದಿದೆ. ಈ 400 ಕೋಟಿ ರೂ. ಸಿಕ್ಕಿಲ್ಲ ಅಂದ್ರೆ, ದೇಶದ ಜನರಿಗೆ ಇನ್ನೆಂದೂ ''ನೈತಿಕತೆ'' ಬಗ್ಗೆ ಪಾಠ ಹೇಳುವ ಹಕ್ಕು ಯಾರಿಗೂ ಇಲ್ಲ. ಆ ನೋಟುಗಳು ಹಳೆಯ ನೋಟುಗಳಾಗಿದ್ದರೆ ಅದನ್ನ ಈಗ ಸಾಗಿಸುವುಕ್ಕೆ ಯಾಕೆ ಮುಂದಾದರು? ಅಥವಾ ಅದು ಡಿಮಾನಿಟೈಸೇಷನ್ ನಂತರದ ಹೊಸ ನೋಟುಗಳೇ ಆಗಿತ್ತಾ? ಇದರ ಹಿಂದಿನ ಕುಳ ಯಾರು? ಇದಕ್ಕೆ ಮಹಾರಾಷ್ಟ್ರ, ಗೋವಾ ಸರ್ಕಾರದ ಉತ್ತರ ಏನು? ಈ ಎಲ್ಲಾ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳಬೇಕಿದೆ.

ಮೋದಿಯವರ ಅವಧಿಯಲ್ಲಿ ದೇಶ ಕಂಡು ಕೇಳರಿಯದ ಘಟನೆಗಳಿಗೆ ಸಾಕ್ಷಿಯಾಗುತ್ತಿದೆ. ಈ ಬಗ್ಗೆ ಅವರನ್ನು ನೇರವಾಗಿ ಪ್ರಶ್ನಿಸೋಣ ಅಂದ್ರೆ ಅವರು ಪತ್ರಿಕಾಗೋಷ್ಠಿಗೆ ಬರುವ ಧೈರ್ಯವನ್ನೇ ಮಾಡುತ್ತಿಲ್ಲ. ಗೋವಾ ಮತ್ತು ಮಹಾರಾಷ್ಟ್ರದಲ್ಲಿ ಬಿಜೆಪಿ ಸರ್ಕಾರವೇ ಇದೆ. ಮೋದಿಯವರಿಗೆ ಈ ಸುದ್ದಿ ತಲುಪಿದೆಯೇ ಗೊತ್ತಿಲ್ಲ. ಮನ್ ಕೀ ಬಾತ್‌ನಲ್ಲಿ ತಾವು ಆಡಿದ ಮಾತುಗಳನ್ನು ಮಾತ್ರ ದೇಶದ ಜನ ಕೇಳಿಸಿಕೊಳ್ಳಬೇಕಿದೆ. ಅದೇ ಜನರ ಪ್ರಶ್ನೆಗಳಿಗೆ ಅವರಲ್ಲಿ ಉತ್ತವಿಲ್ಲ.

ಇದು ಕೇವಲ ಹಣ ಕಳ್ಳಸಾಗಣೆಯ ಸುದ್ದಿ ಅಲ್ಲ. ಇದು ದೇಶದ ಆಡಳಿತ ವ್ಯವಸ್ಥೆ ನಗ್ನವಾಗಿ ಸಿಕ್ಕಿಬಿದ್ದಿರುವ ಕ್ಷಣ. ಡೀಮಾನಿಟೈಸೇಶನ್ ಎಂಬ ಹೆಸರಿನಲ್ಲಿ ದೇಶದ ಬಡ ಜನರ ಕೈಯಲ್ಲಿದ್ದ ನೋಟುಗಳನ್ನು ಕಿತ್ತುಕೊಂಡ ವ್ಯವಸ್ಥೆ, ಇಂದು 400 ಕೋಟಿ ರೂಪಾಯಿ ಹಳೆಯ ನೋಟುಗಳು ಲಾರಿಗಳಲ್ಲಿ ಓಡಾಡುತ್ತಿದ್ದರೂ ಮೌನವಾಗಿದೆ.

ದಾವಣಗೆರೆ ಉಪಚುನಾವಣೆ: ಮುಸ್ಲಿಂ ಸಮುದಾಯಕ್ಕೆ ಸಿಗುವುದೇ ರಾಜಕೀಯ, ಸಾಮಾಜಿಕ ನ್ಯಾಯ?

ಕಾಂಗ್ರೆಸ್ ಈ ಬಾರಿ ತನ್ನ ಸಾಮಾಜಿಕ, ರಾಜಕೀಯ ನ್ಯಾಯದ ಸಿದ್ಧಾಂತವನ್ನು ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾರ್ಯರೂಪಕ್ಕೆ ತರಬೇಕಿದೆ. ನಿರ್ಲಕ್ಷಿಸಿದರೆ ತಿರುಗುಬಾಣವಾಗಬಹುದಾಗಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 80 ಸಾವಿರದಷ್ಟು ಮುಸ್ಲಿಂ ಮತದಾರರಿದ್ದಾರೆ. ಇವರು ಕಳೆದ 30-40 ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವ ಮೂಲಕ, ಸತತವಾಗಿ ಗೆಲ್ಲಿಸುತ್ತ ಬಂದಿದ್ದಾರೆ. ಅವರಿಂದಾಗಿ ಕಾಂಗ್ರೆಸ್ ಮತ್ತು ಶಾಮನೂರು ಕುಟುಂಬ ನಿರಂತರವಾಗಿ ಅಧಿಕಾರ ಅನುಭವಿಸುತ್ತ ಬಂದಿದೆ. ಈಗ, ಶಾಮನೂರು ಶಿವಶಂಕರಪ್ಪನವರ ನಿಧನಾನಂತರ, ಉಪಚುನಾವಣೆ ಎದುರಾಗಿದೆ. ಈ ಬಾರಿಯಾದರೂ ಕಾಂಗ್ರೆಸ್ ಪಕ್ಷ ಹೇಳುವ ಸಾಮಾಜಿಕ ನ್ಯಾಯದ ಅಡಿ ಮುಸ್ಲಿಂ ಸಮುದಾಯಕ್ಕೆ ಅವಕಾಶ ಕಲ್ಪಿಸುತ್ತಾರ ಎನ್ನುವ ಕೂಗು ಕೇಳಿಬರುತ್ತಿದೆ. ಹಾಗೆಯೇ ನಿರಂತರವಾಗಿ ಗೆಲ್ಲಿಸಿಕೊಂಡು ಬಂದ ಶಾಮನೂರು ಕುಟುಂಬ, ಉಮೇದುವಾರಿಕೆಯಿಂದ ಹಿಂದೆ ಸರಿದು ಮುಸ್ಲಿಂ ಅಭ್ಯರ್ಥಿಯನ್ನು ಬೆಂಬಲಿಸಬಹುದಾ ಎನ್ನುವ ಮಾತುಗಳೂ ಕೇಳಿಬರುತ್ತಿವೆ.

ದಾವಣಗೆರೆ ದಕ್ಷಿಣದಲ್ಲಿ ಎಲ್ಲ ಸಮುದಾಯಗಳಿಂದ ಯಜಮಾನರು ಎಂದೇ ಪ್ರೀತಿಯಿಂದ ಕರೆಸಿಕೊಳ್ಳುತ್ತಿದ್ದ ಶಾಮನೂರು ಶಿವಶಂಕರಪ್ಪನವರು, ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿದ್ದರೂ ಎಲ್ಲ ವರ್ಗದ ಜನರ ವಿಶ್ವಾಸ ಪ್ರೀತಿ ಗಳಿಸಿ ಜಾತಿ ಧರ್ಮವನ್ನು ಮೀರಿ ಜಾತ್ಯತೀತ ನಾಯಕರೆನ್ನಿಸಿಕೊಂಡಿದ್ದರು. ಹಿರಿಯ ಮುಸ್ಲಿಂ ನಾಯಕರೂ ಕೂಡ ಯಜಮಾನರು ಎಂದೇ ಕರೆಯುತ್ತಿದ್ದರು.

ಹಿರಿಯ ಕಾಂಗ್ರೆಸ್ ನಾಯಕ, ವಿಧಾನ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಸಾಬ್ ಅವರೇ ಹೇಳುವಂತೆ ''ಯಜಮಾನರು ಬದುಕಿರುವವರೆಗೂ ನಾವು ಯಾರೂ ಕೂಡ ಅವರಿಗೆ ಪರ್ಯಾಯವಾಗಿ ರಾಜಕೀಯ ಮಾಡುವ ಯೋಚನೆಯನ್ನೇ ಮಾಡಿರಲಿಲ್ಲ. ಕಾರಣ ನಾವು ಅವರನ್ನು ನಮ್ಮದೇ ಸಮುದಾಯದ ನಾಯಕ ಹಾಗೂ ಯಜಮಾನರು ಎಂದೇ ಭಾವಿಸಿದ್ದೆವು. ಅವರನ್ನು 1994ರಿಂದ 6 ಬಾರಿ ಸತತವಾಗಿ ಗೆಲ್ಲಿಸುತ್ತ ಬಂದಿದ್ದೇವೆ. ಅವರ ಸಹಾಯಹಸ್ತ, ಸಮಸ್ಯೆಗಳಿಗೆ ಸ್ಪಂದಿಸುವ ಮನಸ್ಸು ಹಾಗೂ ಜಾತ್ಯತೀತ ಗುಣಗಳು ನಮ್ಮನ್ನು ಅವರ ಹಿಂದೆ ಬೆನ್ನಲುಬಾಗಿ ನಿಲ್ಲಿಸಿದ್ದವು'' ಎಂದೇ ಅಭಿಪ್ರಾಯ ಪಡುತ್ತಾರೆ.

''ಈಗ ಅವರ ನಿಧನದಿಂದ ಕ್ಷೇತ್ರ ತೆರವಾಗಿದೆ. ಅವರಿದ್ದಿದ್ದರೆ ಬಹುಶಃ ಕೇಳುತ್ತಿರಲಿಲ್ಲ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಹಿಂದಿನಿಂದಲೂ ಬಲಿಷ್ಠ ಶಕ್ತಿಯಾಗಿ ಮುಸ್ಲಿಂ ಸಮುದಾಯ ಕಾಂಗ್ರೆಸ್ ಬೆನ್ನಿಗೆ ನಿಂತಿದೆ. ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಈ ಬಾರಿ ಅತಿ ಹೆಚ್ಚು ಮತದಾರರನ್ನು ಹೊಂದಿರುವ ಮುಸ್ಲಿಮರನ್ನು ದಕ್ಷಿಣ ಕ್ಷೇತ್ರದಲ್ಲಿ ಪ್ರಮುಖವಾಗಿ, ಪ್ರಥಮವಾಗಿ ಪರಿಗಣಿಸಿ ಟಿಕೆಟ್ ನೀಡಬೇಕು ಹಾಗೂ ಗೆಲ್ಲಿಸಿಕೊಂಡು ಬರಬೇಕು. ಆ ಮೂಲಕ ನಮ್ಮ ಸಮುದಾಯಕ್ಕೆ ರಾಜಕೀಯ ಶಕ್ತಿ ಮತ್ತು ನ್ಯಾಯವನ್ನು ನೀಡಬೇಕು'' ಎಂದು ಬಲವಾಗಿ ಪ್ರತಿಪಾದಿಸಿದರು.

ಈ ನಡುವೆ ಮುಸ್ಲಿಂ ಸಮುದಾಯದಂತೆ ಅಹಿಂದ ಒಕ್ಕೂಟ ಕೂಡ ಬಲವಾಗಿ ಎದ್ದು ನಿಂತಿದೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಹಾಗೂ ದಾವಣಗೆರೆ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಒಂದೇ ಸಮುದಾಯ ಸತತವಾಗಿ ಪ್ರಾಬಲ್ಯ ಗಳಿಸಿ ಅಧಿಕಾರ ಅನುಭವಿಸುತ್ತ ಬಂದಿದೆ. ಒಂದೇ ಸಮುದಾಯಕ್ಕೆ ಸೇರಿದ ಐದು ಜನ ಶಾಸಕರಿದ್ದು, ಒಬ್ಬರು ಸಂಪುಟ ದರ್ಜೆಯ ಸಚಿವರಾಗಿದ್ದಾರೆ. ಒಬ್ಬರು ಸಂಸದರೂ ಆಗಿದ್ದಾರೆ. ಈಗ ದಾವಣಗೆರೆ ಶಾಮನೂರು ಶಿವಶಂಕರಪ್ಪನವರ ನಿಧನದಿಂದ ತೆರವಾಗಿರುವ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಶೇ.80ಕ್ಕೂ ಅಧಿಕ ಜನಸಂಖ್ಯೆ ಇರುವ ಅಹಿಂದ ವರ್ಗಕ್ಕೆ ಕಾಂಗ್ರೆಸ್ ಟಿಕೆಟ್ ನೀಡಬೇಕೆಂದು ಒಕ್ಕೂಟ ಬೇಡಿಕೆ ಇಟ್ಟಿದೆ.

ಇದರ ಬೆನ್ನಲ್ಲೇ ಪತ್ರಿಕಾಗೋಷ್ಠಿ ನಡೆಸಿರುವ ಕುರುಬ, ನಾಯಕ, ಉಪ್ಪಾರ, ಬಂಜಾರ, ಮರಾಠ, ಲಿಂಗಾಯತ ಪಂಚಮಸಾಲಿ, ದಲಿತ ಹಾಗೂ ಮುಸ್ಲಿಂ ಸಮುದಾಯ ಸೇರಿದಂತೆ ಅಹಿಂದ ಮುಖಂಡರು ಕ್ಷೇತ್ರದಲ್ಲಿ ವಿವಿಧ ಸಮುದಾಯದ ಅಹಿಂದ ವರ್ಗಕ್ಕೆ ಸೇರಿದ ಶೇ.80ಕ್ಕೂ ಹೆಚ್ಚು ಮಂದಿ ಮತದಾರರಿದ್ದಾರೆ. ಅವರಿಗೆ ಈ ಬಾರಿ ಪ್ರಾತಿನಿಧ್ಯ ನೀಡಬೇಕು. ಮುಖ್ಯವಾಗಿ ಮುಸ್ಲಿಂ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಬೇಕು. ನಂತರದಲ್ಲಿ ಪಂಚಮಸಾಲಿ ಸಮುದಾಯ ಕೂಡ ಜಿಲ್ಲೆ ಮತ್ತು ಕ್ಷೇತ್ರದಲ್ಲಿ ಅಧಿಕ ಸಂಖ್ಯೆಯಲ್ಲಿದೆ. ವಾಲ್ಮೀಕಿ, ಕುರುಬರು ಹಾಗೂ ಇತರೆ ಅಹಿಂದ ವರ್ಗದ ಅಧಿಕಾರ ವಂಚಿತ ಜಾತಿಗಳ ನಾಯಕರೂ ಇದ್ದಾರೆ. ಹಾಗಾಗಿ ಈ ಬಾರಿ ಮುಸ್ಲಿಂ, ಲಿಂಗಾಯತ ಪಂಚಮಸಾಲಿ ಸೇರಿ ಅಹಿಂದ ವರ್ಗಗಳಿಗೆ ಸೇರಿದ ನಾಯಕರಿಗೆ ಟಿಕೆಟ್ ನೀಡಬೇಕು. ಅಹಿಂದ ವರ್ಗದಲ್ಲಿ ಯಾರಿಗೆ ಟಿಕೆಟ್ ನೀಡಿದರೂ ಗೆಲ್ಲಿಸುವ ಕೆಲಸ ಮಾಡುತ್ತೇವೆ ಎಂದು ಒತ್ತಾಯಿಸಿದ್ದಾರೆ.

ಈ ನಡುವೆ ಕಾಂಗ್ರೆಸ್ ವಲಯದಲ್ಲಿ ಎಸ್‌ಎಸ್ ಮಲ್ಲಿಕಾರ್ಜುನ ಪುತ್ರ ಸಮರ್ಥ ಶಾಮನೂರು ಹೆಸರು ಕೇಳಿ ಬರುತ್ತಿದ್ದು, ಅವರನ್ನು ಅಭ್ಯರ್ಥಿಯನ್ನಾಗಿಸುತ್ತಾರೆಂಬ ಗುಸು-ಗುಸು ಪ್ರಾರಂಭವಾಗಿದೆ. ಅಲ್ಲದೆ ಸಚಿವರ ಸಹೋದರ ಹಾಗೂ ಶಾಮನೂರು ಶಿವಶಂಕರಪ್ಪನವರ ಮಗ ಎಸ್‌ಎಸ್ ಗಣೇಶ್, ನಾನು ಈ ಬಾರಿ ಕಣಕ್ಕೆ ಇಳಿಯಲು ಆಕಾಂಕ್ಷಿಯಿದ್ದೇನೆ. ತಂದೆ ಪ್ರತಿನಿಧಿಸುತ್ತಿದ್ದ ಕ್ಷೇತ್ರಕ್ಕೆ ನನ್ನನ್ನು ಪರಿಗಣಿಸಬೇಕು ಎನ್ನುವ ಬೇಡಿಕೆ ಇಟ್ಟಿದ್ದಾರೆ. ಅಲ್ಲದೆ ಬಿಜೆಪಿ ವಲಯದಲ್ಲಿ ಕೂಡ ಟಿಕೆಟ್ ಬೇಡಿಕೆ ಏರ್ಪಟ್ಟಿದ್ದು, ಹಲವು ಆಕಾಂಕ್ಷಿಗಳ ಹೆಸರುಗಳು ಓಡಾಡುತ್ತಿವೆ. ಈ ನಡುವೆ, ದಾವಣಗೆರೆ ಜಿಲ್ಲೆಯ ಬಿಜೆಪಿ ಹಿರಿಯ ನಾಯಕ ಮಾಜಿ ಸಚಿವ ಎಸ್.ಎ ರವೀಂದ್ರನಾಥ್ ಮಾಧ್ಯಮಗಳೊಂದಿಗೆ ಮಾತನಾಡಿ, ಎಸ್‌ಎಸ್ ಗಣೇಶ್ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಲಿ ಎಂದು ಬಹಿರಂಗವಾಗಿಯೇ ಆಹ್ವಾನಿಸಿ, ಮತದಾರರನ್ನು ಗೊಂದಲಗೊಳಿಸಲು ಯತ್ನಿಸಿದ್ದಾರೆ.

ಜೊತೆಗೆ ಶಾಮನೂರು ಪುತ್ರ ಎಸ್‌ಎಸ್ ಗಣೇಶ್ ಬಿಜೆಪಿ ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಜಗದೀಶ್ ಶೆಟ್ಟರ್ ಅವರ ಸಂಬಂಧಿಯಾಗಿದ್ದು, ಅವರ ಮೂಲಕ ಕಾಂಗ್ರೆಸ್‌ನಲ್ಲಿ ಟಿಕೆಟ್ ಸಿಗದಿದ್ದರೆ ಬಿಜೆಪಿಯಲ್ಲಿ ಕೊಡಲು ತಯಾರಿದ್ದಾರೆ ಎನ್ನುವ ಮಾತನ್ನು ಬಿಜೆಪಿ ನಾಯಕರೇ ತೇಲಿಬಿಟ್ಟಿದ್ದಾರೆ.

ಈ ನಡುವೆ ಕಾಂಗ್ರೆಸ್ ಟಿಕೆಟ್‌ಗಾಗಿ ದಾವಣಗೆರೆ ದಕ್ಷಿಣದಲ್ಲಿ ಹಲವು ಹೆಸರುಗಳು ಮುಖ್ಯವಾಗಿ ಮುಸ್ಲಿಂ ಸಮುದಾಯದಲ್ಲಿ ಕೇಳಿಬಂದಿವೆ. ರಾಜ್ಯ ಕಾಂಗ್ರೆಸ್ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾಗಿರುವ ವಿಧಾನ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಸಾಬ್, ಖಾಲಿದ್ ಅಹಮದ್, ತಂಜೀಂ ಮಾಜಿ ಅಧ್ಯಕ್ಷ ಸಾದಿಕ್ ಪೈಲ್ವಾನ್, ಇಬ್ರಾಹಿಂ ಖಲೀಲುಲ್ಲಾ, ವಕ್ಫ್ ಮಂಡಳಿ ಮಾಜಿ ಅಧ್ಯಕ್ಷ ಮುಹಮ್ಮದ್ ಸಿರಾಜ್ ಸೇರಿದಂತೆ ಆಕಾಂಕ್ಷಿಗಳ ಪಟ್ಟಿ ಬೆಳೆಯುತ್ತಲೇ ಇದೆ. ಅದರಲ್ಲಿ ಬಹುತೇಕ ಹಿರಿಯ ನಾಯಕರ ಪರ ಸಮುದಾಯ ನಿಂತಿದ್ದು, ಎಂಎಲ್‌ಸಿ ಅಬ್ದುಲ್ ಜಬ್ಬಾರ್ ಸಾಬ್ ಅವರೊಂದಿಗೆ ಅಹಿಂದ ಮುಖಂಡರು ಸಮುದಾಯವನ್ನು ಪರಿಗಣಿಸುವಂತೆ ಪತ್ರಿಕಾಗೋಷ್ಠಿ ನಡೆಸಿದ್ದಾರೆ. ಈ ಎಲ್ಲ ಬೆಳವಣಿಗೆಗಳನ್ನು ಕಾಂಗ್ರೆಸ್ ಮತ್ತು ಜಿಲ್ಲಾ ನಾಯಕರು ಹೇಗೆ ನೋಡಲಿದ್ದಾರೆ ಎಂಬುದೇ ಕುತೂಹಲಕರವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR